ಸಂಪಾದಕರು: ರವಿಕುಮಾರ್ ಸಿ.ಹೆಚ್.
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYAPRAGATHI Kannada Daily
ಪ್ರತಿ ಸುದ್ಧಿಯ ಧ್ವನಿ

suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 Issue:86 | ಸಂಪುಟ: 05 ಸಂಚಿಕೆ: 86 | Date:16-04-2026 Thursday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

ಆದಿ ಚುಂಚನಗಿರಿಯಲ್ಲಿ ಭೈರವೈಕ್ಯ ಮಂದಿರ ಉದ್ಘಾಟಿಸಿದ ಪ್ರಧಾನಿ ಮೋದಿ



ಮಂಡ್ಯ: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಪವಿತ್ರ ಕ್ಷೇತ್ರವಾದ ಆದಿಚುಂಚನಗಿರಿ ಮಠಕ್ಕೆ ಭೇಟಿ ನೀಡಿ, ಕಾಲಭೈರವೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ, ಮಠದ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಭೈರವೈಕ್ಯ ಮಂದಿರವನ್ನು ಉದ್ಘಾಟಿಸಿದರು.

ಪರಮಪೂಜ್ಯ ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಗಳ ಗದ್ದುಗೆ ಇರುವ ಸ್ಥಳದಲ್ಲಿಯೇ ಈ ಮಂದಿರವನ್ನು ಭವ್ಯವಾಗಿ ನಿರ್ಮಿಸಲಾಗಿದೆ. ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಠದ ಪೀಠಾಧಿಪತಿಗಳಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ಪ್ರಧಾನಿಯವರನ್ನು ಗೌರವಿಸಿ ಮಾರ್ಗದರ್ಶನ ನೀಡಿದರು. ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸೇರಿದಂತೆ ಹಲವು ರಾಜಕೀಯ ಮುಖಂಡರು ಹಾಗೂ ವಿವಿಧ ಮಠಗಳ ಮಠಾಧೀಶರು ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾದರು.

ಸುಮಾರು 80 ಕೋಟಿ ರೂಪಾಯಿಗಳ ಬೃಹತ್ ವೆಚ್ಚದಲ್ಲಿ ನಿರ್ಮಿಸಲಾದ ಈ ಭೈರವೈಕ್ಯ ಮಂದಿರವನ್ನು ಪ್ರಧಾನಿ ಮೋದಿ ಲೋಕಾರ್ಪಣೆಗೊಳಿಸಿದರು. ಈ ಮಂದಿರ ದ್ರಾವಿಡ ಶೈಲಿಯಲ್ಲಿ ನಿರ್ಮಾಣವಾಗಿದ್ದು, ಇದರಲ್ಲಿ ಚಾಲುಕ್ಯ, ಹೊಯ್ಸಳ, ಚೋಳ ಹಾಗೂ ಗಂಗರ ಕಾಲದ ಅದ್ಭುತ ಶಿಲ್ಪಕಲೆಗಳ ಸಮಾಗಮವನ್ನು ಕಾಣಬಹುದಾಗಿದೆ. ಈ ಮಂದಿರದ ನಿರ್ಮಾಣ ಕಾರ್ಯಕ್ಕೆ ಹತ್ತು ವರ್ಷಗಳ ಹಿಂದೆಯೇ ಅಡಿಗಲ್ಲು ಹಾಕಲಾಗಿತ್ತು. ಖ್ಯಾತ ಶಿಲ್ಪಿ ಶಂಕರ್ ಸ್ತಪತಿ ಅವರ ನೇತೃತ್ವದಲ್ಲಿ ಮಂದಿರದ ಕೆತ್ತನೆ ಕಾರ್ಯ ನೆರವೇರಿದೆ.

ಇದಕ್ಕೂ ಮುನ್ನ ಬೆಂಗಳೂರಿನ ಎಚ್ಎಎಲ್ ವಿಮಾನ ನಿಲ್ದಾಣದಲ್ಲಿ ವಿಮಾನದಲ್ಲಿ ಬಂದಿಳಿದ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವಾಗತಿಸಿದರು. ಹೆಚ್ಎಎಲ್ ವಿಮಾನ ನಿಲ್ದಾಣದಿಂದ ಮೋದಿ ಸೇನಾ ಹೆಲಿಕ್ಯಾಪ್ಟರ್ ಮೂಲಕ ಆದಿಚುಂಚನಗಿರಿಗೆ ತೆರಳಿದರು. ಇದಕ್ಕಾಗಿ ಭದ್ರತಾ ದೃಷ್ಟಿಯಿಂದ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ವಿಮಾನ ನಿಲ್ದಾಣದಿಂದ ಹೆಲಿಪ್ಯಾಡ್‌ವರೆಗೆ ಎಲ್ಲೆಡೆ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.

ಹೆಚ್ಎಎಲ್ ಏರ್‌ಪೋರ್ಟ್‌ನಲ್ಲಿ ಮೋದಿ ಅವರನ್ನು ಸ್ವಾಗತಿಸಲು ಸಿಎಂ ಸಿದ್ದರಾಮಯ್ಯ, ಕಂದಾಯ ಸಚಿವ ಕೃಷ್ಣ ಭೈರೆಗೌಡ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಪೊಲೀಸ್ ಮಹಾನಿರ್ದೇಶಕ ಸಲೀಂ, ನಗರ ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಸೇರಿದಂತೆ ಹಲವಾರು ಗಣ್ಯರು ಆಗಮಿಸಿದ್ದರು.

ಬೆಂಗಳೂರಿಗೆ ಬಂದ ಪ್ರಧಾನಿಗೆ
18 ಬೇಡಿಕೆಗಳ ಮನವಿ ಪತ್ರ ಸಲ್ಲಿಸಿದ ಸಿದ್ದರಾಮಯ್ಯ

ಪ್ರಧಾನಿ ನರೇಂದ್ರ ಮೋದಿ ಅವರು ಮಂಡ್ಯ ಜಿಲ್ಲೆಯ ಆದಿಚುಂಚನಗಿರಿ ಮಠಕ್ಕೆ ಇಂದು ಭೇಟಿ ನೀಡಿದರು. ಬೆಂಗಳೂರಿನ ಎಚ್ಎಎಲ್ ವಿಮಾನ ನಿಲ್ದಾಣದಲ್ಲಿ ವಿಮಾನದಿಂದ ಇಳಿದ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವಾಗತಿಸಿದರು. ಇದೇ ವೇಳೆ 18 ಬೇಡಿಕೆಗಳನ್ನು ಹೊಂದಿರುವ ಮನವಿ ಪತ್ರವನ್ನು ಸಿಎಂ ಅವರು ಪ್ರಧಾನಿಗೆ ನೀಡಿದ್ದಾರೆ.



ರಾಗಿ ಮುದ್ದೆ, ಕಾವೇರಿ ನೀರು ನೆನೆದ ಪಿಎಂ



ಮಂಡ್ಯ: ಯುವಜನತೆ ಒಂಬತ್ತು ಸೂತ್ರಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ನಾವು ವಿಕಸಿತ ಕರ್ನಾಟಕ ಹಾಗೂ ವಿಕಸಿತ ಭಾರತದತ್ತ ಮುನ್ನಡೆಯಬಹುದು ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ನುಡಿದರು. ಶ್ರೀ ಕ್ಷೇತ್ರ ಆದಿಚುಂಚನಗಿರಿ ಮಠಕ್ಕೆ ಭೇಟಿ ನೀಡಿ, ಮಠದ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಭೈರವೈಕ್ಯ ಮಂದಿರವನ್ನು ಉದ್ಘಾಟಿಸಿದ ಬಳಿಕ ಅವರು ಮಾತನಾಡಿದರು.

ಕರ್ನಾಟಕದ ಎಲ್ಲ ಸಹೋದರ ಸಹೋದರಿಯರಿಗೆ ನನ್ನ ನಮಸ್ಕಾರಗಳು ಎಂದು ಅಚ್ಚ ಕನ್ನಡದಲ್ಲಿ ಮಾತು ಆರಂಭಿಸಿ ಅವರು ಹಿಂದಿಯಲ್ಲಿ ಮುಂದುವರಿಸಿದರು. ಬಾಲಗಂಗಾಧರ ನಾಥ ಶ್ರೀಗಳು ಅನ್ನ, ಅಕ್ಷರ, ಆರೋಗ್ಯ, ಅಧ್ಯಾತ್ಮ, ಆಶ್ರಯ, ಅರಣ್ಯ, ಅನುಕಂಪ, ಆಕಳು ಮತ್ತು ಸ್ವಚ್ಛತೆ ಈ ಒಂಬತ್ತು ಉದಾತ್ತ ಆಶಯಗಳೊಂದಿಗೆ ಬದುಕಿದರು. ನಾವೂ ಕೂಡ ಒಂಬತ್ತು ಸಂಕಲ್ಪಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ ಎಂದು ಅವರು ತಿಳಿಸಿದರು. ಅವರು ನೀಡಿದ ಒಂಬತ್ತು ಸಂಕಲ್ಪಗಳು ಹೀಗಿದ್ದವು: ಜಲಸಂರಕ್ಷಣೆ: ಎಲ್ಲ ಕಡೆ ನೀರು ಉಳಿಸುವುದು.ಪರಿಸರ: ಎಲ್ಲರೂ ತಮ್ಮ ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವುದು.

ಸ್ವಚ್ಛತೆ: ಮನೆ, ಸಾರ್ವಜನಿಕ ತಾಣ ಎಲ್ಲ ಕಡೆಯೂ ಸ್ವಚ್ಛತೆ ಕಾಪಾಡುವುದು.

ರಾಗಿ ಮುದ್ದೆಯನ್ನು ಜನಪ್ರಿಯ ಗೊಳಿಸಿದವರು ಎಚ್‌ಡಿ ದೇವೇಗೌಡರು

ಸ್ವದೇಶಿ: ಸ್ವದೇಶಿ ನಿರ್ಮಿತ ವಸ್ತುಗಳನ್ನು ಬಳಸಿ ಆತ್ಮನಿರ್ಭರತೆ ಬೆಳೆಸುವುದು, ವೋಕಲ್ ಫಾರ್ ಕೆಮಿಕಲ್ ಮುಕ್ತ ಕೃಷಿ: ರಾಸಾಯನಿಕ ಮುಕ್ತ ಕೃಷಿಯ ಮೂಲಕ ಜನತೆಯ ಆರೋಗ್ಯ ಕಾಪಾಡುವುದು. ಆರೋಗ್ಯಕರ ಆಹಾರ: ಎಚ್‌ಡಿ ದೇವೇಗೌಡರು ರಾಗಿ ಮುದ್ದೆಯನ್ನು ಜನಪ್ರಿಯಗೊಳಿಸಿದರು. ಅದು ಆರೋಗ್ಯದ ಪ್ರತೀಕ. ಉತ್ತಮ ಆಹಾರದಿಂದ ಉತ್ತಮ ಚಿಂತನೆ. ಯೋಗ, ಆಟ, ಫಿಟ್‌ನೆಸ್: ಆರೋಗ್ಯ ಕಾಪಾಡಿಕೊಳ್ಳಲುಬಹುದು ಎಂದರು. ಇಂದು ನನ್ನ ಮನಸ್ಸಿನ ಭಾವನೆ ಕೇವಲ ಶಬ್ದಗಳಲ್ಲಿ ಹೇಳುವುದಕ್ಕೆ ಆಗುವುದಿಲ್ಲ. ಅಂತಹ ಅನುಭೂತಿ ಈ ಮಠದಲ್ಲಿ ನನಗೆ ಸಿಕ್ಕಿದೆ. ಸಕ್ಕರೆಗೆ ಮಂಡ್ಯ ನಗರ ಹಾಗೂ ವಡೆಗೆ ಮದ್ದೂರು ಹೆಸರುವಾಸಿಯಾಗಿದೆ. ಕರ್ನಾಟಕ ರಾಜ್ಯವು ತತ್ವಜ್ಞಾನ ಹಾಗೂ ತಂತ್ರಜ್ಞಾನಕ್ಕೆ ಸಮೃದ್ಧವಾಗಿದೆ. ಆದಿಚುಂಚನಗಿರಿ ಮಠ ಸಮಾಜಕ್ಕೆ ಆಧ್ಯಾತ್ಮಿಕ ಮಾರ್ಗದರ್ಶನ ನೀಡುತ್ತಿದೆ. ಈ ಮಠವು ಸ್ವದೇಶಿ ಮತ್ತು ಆತ್ಮನಿರ್ಭರತೆಯ ಸಂಕೇತವಾಗಿದೆ. ನಮ್ಮ ಸರ್ಕಾರ ಕೂಡ ಆಯುಷ್ಮಾನ್ ಭಾರತ್ ಅಡಿಯಲ್ಲಿ ಉಚಿತ ಚಿಕಿತ್ಸೆ ನೀಡುವ ಮೂಲಕ ಮಠದ ಆಶಯದಂತೆಯೇ ಆರೋಗ್ಯ ಸೇವೆಯನ್ನು ಬಡವರಿಗೆ ತಲುಪಿಸುತ್ತಿದೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ತಿಳಿಸಿದರು.

ಸ್ವಾಮೀಜಿಯವರ ಪರಿಸರ ಪ್ರೇಮವನ್ನು ಮೆಚ್ಚಿದ ಪ್ರಧಾನಿ, ಅವರ ಕರುಣೆ ಕೇವಲ ಮನುಷ್ಯರಿಗೆ ಸೀಮಿತವಾಗಿರಲಿಲ್ಲ. ರಾಷ್ಟ್ರಪಕ್ಷಿ ನವಿಲುಗಳ ಸಂರಕ್ಷಣೆಗಾಗಿ ಅವರು ನಡೆಸಿದ ಸಾಮಾಜಿಕ ಆಂದೋಲನವು ಇಂದಿಗೂ ನಮಗೆ ಮಾದರಿ. ಪರಿಸರ ಸಂರಕ್ಷಣೆ ನಮ್ಮ ಸಾಂಸ್ಕೃತಿಕ ಚೇತನದ ಭಾಗ ಎಂಬುದನ್ನು ಅವರು ಸಾಬೀತುಪಡಿಸಿದರು ಎಂದರು. ದೆಹಲಿಯಲ್ಲಿ ನನ್ನ ನಿವಾಸದಲ್ಲೂ ಹಲವು ನವಿಲುಗಳಿದ್ದು, ಅವು ತುಂಬಾ ಶಾಂತ ಸ್ವಭಾವದ ಹಕ್ಕಿಗಳು ಎಂದರು.

ನಮ್ಮ ದೈನಂದಿನ ಜೀವನದಲ್ಲಿ ಉತ್ತಮ ಆಹಾರ, ಯೋಗವನ್ನು ಅಳವಡಿಸಿಕೊಳ್ಳಬೇಕು, ಜತೆಗೆ ಊಟದಲ್ಲಿ ಬಳಸುವ ಎಣ್ಣೆಯನ್ನು ಶೇ.10ರಷ್ಟು ಕಡಿಮೆ ಮಾಡಬೇಕೆಂದು ಸಲಹೆ ನೀಡಿದರು. ಮಂಡ್ಯದ ಜನತೆಗೆ ನೀರಿನ ಬೆಲೆ ಚೆನ್ನಾಗಿ ತಿಳಿದಿದೆ. ಇಲ್ಲಿನ ಜನರ ಬದುಕು ಕಾವೇರಿ ನದಿಯೊಂದಿಗೆ ತಳುಕು ಹಾಕಿಕೊಂಡಿದೆ ಎಂದು ನುಡಿದರು.

ಯಡಿಯೂರಪ್ಪ ಮಗನನ್ನು ಗೆಲ್ಲಿಸಿ ಅಂದಿದ್ದ ಶಾಮನೂರು ವಿರುದ್ಧ ಯಾಕೆ ಕ್ರಮ ಆಗಿಲ್ಲ: ಸಿಡಿದೆದ್ದ ಮುಸ್ಲಿಂ ನಾಯಕ

ದಾವಣಗೆರೆ ದಕ್ಷಿಣ ಕ್ಷೇತ್ರದ ಉಪಚುನಾವಣೆ ಫಲಿತಾಂಶಕ್ಕೂ ಮುನ್ನವೇ ಕಾಂಗ್ರೆಸ್ ನಲ್ಲಿ ಮಹತ್ವದ ಬೆಳವಣಿಗೆಗಳು ನಡೆಯುತ್ತಿವೆ, ಟಿಕೆಟ್ ವಿಚಾರಕ್ಕೆ ಆರಂಭವಾಗಿ ಇದೀಗ ನಾಯಕರ ತಲೆದಂಡ ತನಕ ಬಂದು ನಿಂತಿದೆ. ಹೌದು ವಿಧಾನಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಅವರನ್ನು ಕಾಂಗ್ರೆಸ್ ನಿಂದ ಅಮಾನತು ಮಾಡಲಾಗಿದ್ದು, ಇದೀಗ ಸಚಿವ ಜಮೀರ್ ಅಹ್ಮದ್ ಖಾನ್‌ಗೂ ಸಂಕಷ್ಟ ಎದುರಾಗಿದೆ. ಇನ್ನೊಂದೆಡೆ ಕೆಲ ಮುಸ್ಲಿಂ ನಾಯಕರು ಸಹ ಕಾಂಗ್ರೆಸ್ ಹೈಕಮಾಂಡ್ ನಡೆಗೆ ಆಕ್ರೋಶಗೊಂಡಿದ್ದು, ಈ ಹಿಂದೆ ಶಾಮನೂರು ಶಿವಶಂಕರಪ್ಪನವರು ಬಹಿರಂಗವಾಗಿಯೇ ಯಡಿಯೂರಪ್ಪನವರ ಪುತ್ರ ರಾಘವೇಂದ್ರ ಅವರನ್ನ ಗೆಲ್ಲಿಸಿ ಎಂದು ಹೇಳಿದಕ್ಕೆ ಯಾವ ಕ್ರಮಕೈಗೊಂಡಿದ್ದೀರಿ ಎಂದು ಪ್ರಶ್ನಿಸುತ್ತಿದ್ದಾರೆ.



ಇನ್ನು ಅವಮಾನ ತುಗೊಂಡಿರುವ ಅಬ್ದುಲ್ ಜಬ್ಬಾರ್ ಸಹ ಬೆಂಗಳೂರಿನಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ ಶಾಮನೂರು ಶಿವಶಂಕರಪ್ಪನವರು ಈ ಹಿಂದೆ ನೀಡಿದ್ದ ಹೇಳಿಕೆಯನ್ನು ಉಲ್ಲೇಖಿಸಿ ಹೈಕಮಾಂಡ್ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ. ಪಕ್ಷದಲ್ಲಿ ಒಬ್ಬರಿಗೊಂದು ರೀತಿ, ಇನ್ನೊಬ್ಬರಿಗೊಂದು ರೀತಿ ಆಗುತ್ತಿದೆ. ಶಾಮನೂರು ಓಪನ್ ಸ್ಟೇಜ್‌ನಲ್ಲಿ ಯಡಿಯೂರಪ್ಪನವರ ಮಗನನ್ನು ಗೆಲ್ಲಿಸಿ ಅಂದಿದ್ರು, ಆಗ ಶಾಮನೂರು ಶಿವಶಂಕರಪ್ಪ ವಿರುದ್ಧ ಯಾಕೆ ಕ್ರಮ ಆಗಲಿಲ್ಲ? ಎಂದು ಪ್ರಶ್ನಿಸಿದ್ದಾರೆ.

ಕುಡಿಯುವ ನೀರಿನ ಸಮಸ್ಯೆಯನ್ನು ಶೀಘ್ರ ಪರಿಹರಿಸಲು ಸೂಚನೆ– ಬಿ.ವಿ. ಅಶ್ವಿಜ

ತುಮಕೂರು: ಜಿಲ್ಲೆಯಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ಶೀಘ್ರದಲ್ಲೇ ಪರಿಹರಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತಿ ವಿಡಿಯೋ ಸಂವಾದ ಕೇಂದ್ರದಲ್ಲಿ ಬುಧವಾರ ಮಹತ್ವದ ಸಭೆ ನಡೆಸಿ ಅವರು ಮಾತನಾಡಿದರು.

ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳಿಗೆ ತಕ್ಷಣ ಭೇಟಿ ನೀಡಿ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ವಿಶೇಷ ಸಭೆ ನಡೆಸಬೇಕು. ಗ್ರಾಮಗಳಲ್ಲಿನ ಎಲ್ಲ ಕಾಮಗಾರಿಗಳನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸಿ ಜನರಿಗೆ ನಿರಂತರವಾಗಿ ಶುದ್ಧ ಕುಡಿಯುವ ನೀರು ಒದಗಿಸಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯ ಎಲ್ಲಾ ಗ್ರಾಮಗಳ ಬೋರ್‌ವೆಲ್‌ಗಳ ಸ್ಥಿತಿ, ಖಔ ಪ್ಲಾಂಟ್‌ಗಳ ಸಂಖ್ಯೆ, ಫ್ಲಷಿಂಗ್ ಕಾರ್ಯಗಳ ಪ್ರಗತಿ, ಪೈಪ್‌ಲೈನ್‌ಗಳ ಅಳವಡಿಕೆ, ಪಂಪ್ ಮತ್ತು ಮೋಟಾರ್ ವ್ಯವಸ್ಥೆಗಳ ಕುರಿತು ಮಾಹಿತಿ ಪಡೆದ ಅವರು, ಕುಡಿಯುವ ನೀರು ಸರಬರಾಜು ಮಾಡುವ ಟ್ಯಾಂಕರ್‌ಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ಹೊಸ ಬೋರ್‌ವೆಲ್‌ಗಳಿಗೆ ಅನುಮೋದನೆ ನೀಡುವುದು ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಪ್ರಗತಿ ಪರಿಶೀಲನೆ ಹಾಗೂ ವಿವಿಧ ಯೋಜನೆಗಳ ಪ್ರಗತಿ ಕುರಿತು ವಿವರವಾದ ಚರ್ಚೆ ನಡೆಯಿತು.



ಕಾರ್ಯನಿರ್ವಹಿಸುತ್ತಿರುವ, ಕಾರ್ಯನಿರ್ವಹಿಸದ ಹಾಗೂ ಜೆಜೆಎಂ ಅಡಿಯಲ್ಲಿ ಪ್ರಸ್ತಾಪಿತ, ತೋಡಿದ, ಅಳವಡಿಸಿದ ಮತ್ತು ಪರೀಕ್ಷೆಗೊಂಡ ಬೋರ್‌ವೆಲ್‌ಗಳ ಒಟ್ಟು ಸಂಖ್ಯೆಯನ್ನು ಕುರಿತು ವಿಚಾರಿಸಲಾಯಿತು. ಖಾಸಗಿ ಟ್ಯಾಂಕರ್‌ಗಳು ಮತ್ತು ಖಾಸಗಿ ಬೋರ್‌ವೆಲ್‌ಗಳಿಗೆ ಸಂಬಂಧಿಸಿದ ಪಾವತಿಗಳಲ್ಲಿ ಯಾವುದಾದರೂ ಬಾಕಿ ಇರುವುದರ ಬಗ್ಗೆ ಚರ್ಚಿಸಲಾಯಿತು.

ಇಂದಿನವರೆಗೆ ಟಾಸ್ಕ್ ಫೋರ್ಸ್ ಸಭೆಗಳು ನಡೆದಿರುವ ಮಾಹಿತಿ ಹಾಗೂ ಕಳುಹಿಸಿದ ಬೋರ್‌ವೆಲ್ ಪ್ರಸ್ತಾವನೆಗಳ ವಿವರಗಳನ್ನು ಪರಿಶೀಲಿಸಿದರು.

ಎಲ್ಲಾ ತಾಲ್ಲೂಕುಗಳಲ್ಲಿ ಇಂದಿನವರೆಗೆ ಓವರ್‌ಹೆಡ್ ಟ್ಯಾಂಕ್‌ಗಳ ಸ್ವಚ್ಛತೆಗೆ ಸಂಬಂಧಿಸಿದ ವಿವರವನ್ನು ಪರಿಶೀಲಿಸಿದರು. ಖಾಸಗಿ ಸಂಸ್ಥೆಗಳ ಮೂಲಕ ನಿರ್ವಹಿಸಲಾಗುತ್ತಿರುವ ಖಔ ಪ್ಲಾಂಟ್‌ಗಳಲ್ಲಿ ಎಷ್ಟು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಕಾರ್ಯನಿರ್ವಹಿಸದ ಸ್ಥಿತಿಯಲ್ಲಿವೆ ಎಂಬುದನ್ನು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಸಭೆಯಲ್ಲಿ ವಿವಿಧ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್‌ಗಳು, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಹಾಗೂ ವಿವಿಧ ವಿಭಾಗ ಮಟ್ಟದ ಅಧಿಕಾರಿಗಳು ಹಾಜರಿದ್ದರು. ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಭಾಗವಹಿಸಿದ್ದರು.



ತುಮಕೂರು : ವಿವಿಧ ದಲಿತ ಮುಖಂಡರುಗಳಿಂದ ತುಮಕೂರು ನಗರದ ಜಿಲ್ಲಾಧಿಕಾರಿಗಳ ಕಛೇರಿ ಪಕ್ಕದ ರಸ್ತೆ, ಡಾ. ಅಂಬೇಡ್ಕರ್ ಬೀದಿ (ಗುಂಚಿ ಸರ್ಕಲ್ ಹತ್ತಿರ) ಡಾ. ಬಿ.ಆರ್.ಅಂಬೇಡ್ಕರ್ ರವರ 135ನೇ ಜನ್ಮದಿನಾಚರಣೆ ಅಂಗವಾಗಿ ಬಾಬಾ ಸಾಹೇಬರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅಂಬೇಡ್ಕರ್‌ರವರ ವಿಚಾರಧಾರೆಗಳನ್ನು ಸಾರ್ವಜನಿಕರಿಗೆ ತಿಳಿಸುವುದರ ಮೂಲಕ ಅಂಬೇಡ್ಕರ್ ಕುರಿತಾಗಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಈ ಸಂದರ್ಭದಲ್ಲಿ ಟಿ.ಸಿ ರಾಮಯ್ಯ, ರಂಗಸ್ವಾಮಿ ಹೆಚ್, ಅಗಲಗುಂಟೆ ಅಮರ್, ಟಿ.ಸಿ.ರಾಮಮೂರ್ತಿ, ಶಿವರಾಜು ಕೌತಮಾರನಹಳ್ಳಿ, ನರಸಿಂಹರಾಜು, ಆಲೂರು ಮಂಜುನಾಥ, ಕೆಂಪರಾಜ್, ಅಯ್ಯನಪಾಳ್ಯ ಶ್ರೀನಿವಾಸ್, ನೇಗಲಾಲ ಸಿದ್ದೇಶ, ಮೇಳೇಕಲ್ಲಹಳ್ಳಿ ಯೋಗೀಶ್, ಜಯನುಡಿ ಜಯಣ್ಣ, ಬಿ.ಜೆ.ಸಾಗರ್, ಶಿವಲಿಂಗಯ್ಯ, ಕಾಗ್ಗೆರೆ ಸಂತೋಷ್ ಕುಮಾರ್, ಹುಚ್ಚ ನರಸಯ್ಯ ಕೌತಮಾರನಹಳ್ಳಿ ಸೇರಿದಂತೆ ವಿವಿಧ ದಲಿತ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಮೀಸಲಾತಿ ಅಧಿನಿಯಮ ಬೆಂಬಲಿಸಿ ಮಹಿಳೆಯರ ಬೈಕ್ ರ‍್ಯಾಲಿ

ತುಮಕೂರು: ಲೋಕಸಭೆ ಮತ್ತು ರಾಜ್ಯ ಶಾಸಕಾಂಗ ಸಭೆಗಳಲ್ಲಿ ಮಹಿಳೆಯರಿಗೆ ಶೇಕಡ 33ರಷ್ಟು ಮೀಸಲಾತಿ ಕಲ್ಪಿಸುವ ನಾರಿಶಕ್ತಿ ವಂದನ್ ಅಧಿನಿಯಮ ಜಾರಿಗೊಳಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರ ಸರ್ಕಾರವನ್ನು ಬೆಂಬಲಿಸಿ, ಮೋದಿಯವರನ್ನು ಅಭಿನಂದಿಸಿ ಮಹಿಳಾ ಶಕ್ತಿ ವೇದಿಕೆ ನೇತೃತ್ವದಲ್ಲಿ ಬುಧವಾರ ಸಂಜೆ ನಗರದಲ್ಲಿ ಮಹಿಳೆಯರು ಬೈಕ್ ರ‍್ಯಾಲಿ ನಡೆಸಿ ಸಂಭ್ರಮಿಸಿದರು.

ಎಸ್‌ಐಟಿ ಎದುರು ಬೈಕ್ ರ‍್ಯಾಲಿಗೆ ಚಾಲನೆ ನೀಡಿ ಮಾತನಾಡಿದ ಶಾಸಕ ಜಿ.ಬಿ. ಜ್ಯೋತಿಗಣೇಶ್, ಎಲ್ಲಾ ಕ್ಷೇತ್ರದಲ್ಲೂ ಸಮರ್ಥವಾಗಿ ಕೆಲಸ ಮಾಡುತ್ತಿರುವ ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ನೀಡಿ ಅವರು ರಾಜ್ಯ, ಕೇಂದ್ರದ ಆಡಳಿತ ನಡೆಸುವ ರಾಜಕೀಯ ಸ್ಥಾನಮಾನ ಕಲ್ಪಿಸುವ ಮಹಿಳಾ ಮೀಸಲಾತಿ ಅಧಿನಿಯಮ ಜಾರಿಯಾಗುತ್ತಿರುವುದು ದೇಶದ ಮಹಿಳೆಯರಿಗೆ ಸಲ್ಲುವ ಗೌರವವಾಗಿದೆ. ಲೋಕಸಭೆ, ರಾಜ್ಯ ಶಾಸಕಾಂಗಸಭೆಗಳಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ಸಿಗಬೇಕು ಎಂಬ ಬೇಡಿಕೆ ಪ್ರಧಾನಿ ನರೇಂದ್ರ ಮೋದಿಯವರ ಮೂಲಕ ಈಡೇರುತ್ತಿದೆ ಎಂದು ಹೇಳಿದರು.

ಮಹಿಳೆಯರಿಗೆ ದೇಶ ಆಳುವ ಅರ್ಹತೆ, ಸಾಮರ್ಥ್ಯವಿದೆ. ಆಡಳಿತದಲ್ಲಿ ಮಹಿಳೆಯರ ಸಹಭಾಗಿತ್ವದ ಅವಶ್ಯಕತೆಯೂ ಇದೆ. ಈ ಹಿಂದೆ ಕೆಲವು ಪಟ್ಟಭದ್ರಹಿತಾಸಕ್ತಿಗಳು ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಜಾರಿಗೆ ಅಡ್ಡಿಪಡಿಸಿದ್ದರು. ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ದೊರಕಿಸಬೇಕು ಎಂದು ಪ್ರಧಾನಿ ಮೋದಿಯವರ ಸರ್ಕಾರ ಈ ತಿಂಗಳ 16ರಿಂದ ನಡೆಯುವ ಲೋಕಸಭೆಯ ವಿಶೇಷ ಅಧಿವೇಶನದಲ್ಲಿ ಮಹಿಳಾ ಮೀಸಲಾತಿ ಅಧಿನಿಯಮವನ್ನು ಜಾರಿಗೊಳಿಸಲು ಮುಂದಾಗಿದೆ. ಈ ಮೂಲಕ ನಿಜವಾದ ಮಹಿಳಾ ಸಬಲೀಕರಣ ಸಾಧ್ಯವಾಗುತ್ತದೆ ಎಂದು ಶಾಸಕ ಜ್ಯೋತಿಗಣೇಶ್ ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಸುಮಿತ್ರಮ್ಮ ಮಾತನಾಡಿ, ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ಬೇಕು ಎಂಬ ಆಶಯ ಪ್ರಧಾನಿ ಮೋದಿಯವರ ಸರ್ಕಾರದ ಮೂಲಕ ಈಡೇರುತ್ತಿದೆ. ಇಂದು ಬೈಕ್ ರ‍್ಯಾಲಿ ನಡೆಸಿ ಮೋದಿವರನ್ನು ಬೆಂಬಲಿಸಿ, ಅಭಿನಂದಿಸುತ್ತೇವೆ ಎಂದು ಹೇಳಿದರು.



ಎಪಿಎಂಸಿ ಮಾಜಿ ಅಧ್ಯಕ್ಷೆ ತಾರಾದೇವಿ, ಜಿಲ್ಲಾ ಬಿಜೆಪಿ ಕಾರ್ಯದರ್ಶಿ ಜ್ಯೋತಿ ತಿಪ್ಪೇಸ್ವಾಮಿ, ನಗರ ಉಪಾಧ್ಯಕ್ಷೆ ರೇಖಾ ಶಿವಕುಮಾರ್ ಮಾತನಾಡಿ, ಮಹಿಳಾ ಮೀಸಲಾತಿ ಜಾರಿ ಮೂಲಕ ಪ್ರಧಾನಿ ಮೋದಿಯವರು ಮಹಿಳೆಯರಿಗೆ ರಾಜಕೀಯ ಶಕ್ತಿ, ಸ್ಥಾನಮಾನ ಕಲ್ಪಿಸುವ ಮೂಲಕ ಮಹಿಳೆಯರನ್ನೂ ಗೌರವಿಸುತ್ತಿದ್ದಾರೆ ಎಂದು ಹೇಳಿದರು.

ನಗರ ಬಿಜೆಪಿ ಅಧ್ಯಕ್ಷ ಟಿ.ಕೆ. ಧನುಷ್, ಪ್ರಧಾನ ಕಾರ್ಯದರ್ಶಿ ವಿರೂಪಾಕ್ಷಪ್ಪ, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ನವಚೇತನ್, ಮಹಿಳಾ ಮೋರ್ಚಾ ನಗರ ಅಧ್ಯಕ್ಷೆ ವಸಂತ ಸುದರ್ಶನ್, ಮುಖಂಡರಾದ ಗಣೇಶ್‌ಪ್ರಸಾದ್, ರಕ್ಷಿತ್, ರಾಧಾ ಗಂಗಾಧರ್, ಅಂಬಿಕಾ, ಮಂಜುಳಾ ಲೋಕೇಶ್, ಲತಾಬಾಬು, ಲೀಲಾವತಿ, ನಾಗರತ್ನ ಮೊದಲಾದವರು ಭಾಗವಹಿಸಿದ್ದರು.

ರಾಷ್ಟ್ರ ಧ್ವಜ ಪ್ರದರ್ಶಿಸುತ್ತಾ ಮಹಿಳೆಯರು ಬೈಕ್ ರ‍್ಯಾಲಿ ನಡೆಸಿದರು. ಎಸ್‌ಐಟಿ ಮುಂಭಾಗದಿಂದ ಹೊರಟ ರ‍್ಯಾಲಿ ಗಂಗೋತ್ರಿ ರಸ್ತೆ, ಎಸ್‌ಐಟಿ, ಎಸ್‌ಎಸ್ ಪುರಂ ರಸ್ತೆ, ಭದ್ರಮ್ಮ ವೃತ್ತ ಮೂಲಕ ಪ್ರಮುಖ ರಸ್ತೆಗಳಲ್ಲಿ ಸಾಗಿತು.

ರಾಜ್ಯ ಮಟ್ಟದ ಮಾಧ್ಯಮ ಹಬ್ಬ 'ಸಂಭ್ರಮ'–2026
ಕಾರ್ಯಕ್ರಮಕ್ಕೆ ವಿದ್ಯಾರ್ಥಿಗಳ ನೋಂದಣಿ ಪ್ರಾರಂಭ

ತುಮಕೂರು: ಶ್ರೀ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರವು 'ರಾಜ್ಯಮಟ್ಟದ ಮಾಧ್ಯಮ ಹಬ್ಬ ಸಂಭ್ರಮ–2026' ಕಾರ್ಯಕ್ರಮವನ್ನು ಏಪ್ರಿಲ್ 23 ಮತ್ತು 24ರಂದು ಹಮ್ಮಿಕೊಳ್ಳಲಾಗಿದ್ದು, ಇದಕ್ಕೆ ರಾಜ್ಯದ ಪದವಿ ವಿದ್ಯಾರ್ಥಿಗಳು ನೋಂದಾಯಿಸಿಕೊಳ್ಳಬಹುದು.

ರಾಜ್ಯದ ವಿವಿಧ ಜಿಲ್ಲೆಗಳ ಪದವಿ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಅವರಲ್ಲಿನ ಕೌಶಲ್ಯಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಒಂದು ಉತ್ತಮ ಕಾರ್ಯಕ್ರಮವಾಗಿದೆ. ಎರಡು ದಿನದ ಈ ಕಾರ್ಯಕ್ರಮದಲ್ಲಿ ಒಟ್ಟು ಎಂಟು ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಮಾಧ್ಯಮ ಮತ್ತು ಪ್ರಚಲಿತ ವಿಷಯಗಳ ಕುರಿತು ರೇಡಿಯೋ ಜಾಕಿ, ಪಿಟಿಸಿ, ಫೋಟೋಗ್ರಫಿ, ವೈರಲ್ ಅಡ್ಡ (ರೀಲ್ಸ್), ವರದಿಗಾರಿಕೆ, ಟೆಲಿವಿಷನ್ ಸುದ್ದಿ ವಾಚನ (ನ್ಯೂಸ್ ರೀಡಿಂಗ್), ಕೊಲೇಜ್ ಮೇಕಿಂಗ್, ಮ್ಯಾಡ್ ಆಡ್ಸ್ ಸ್ಪರ್ಧೆಗಳನ್ನು ನಡೆಯಲಿದ್ದು. ಯಾವುದೇ ಪದವಿ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಈ ಸ್ಪರ್ಧೆಗಳಲ್ಲಿ ಭಾಗವಹಿಸಬಹುದು.



ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಆನ್‌ಲೈನ್ ಅಥವಾ ಸ್ಥಳದಲ್ಲಿಯೇ ನೋಂದಣಿ ಮಾಡಿಕೊಳ್ಳುವ ಅವಕಾಶ ಕಲ್ಪಿಸಲಾಗಿದೆ. ನೋಂದಣಿ ಮಾಡಿಕೊಳ್ಳುವವರು ಕಾಲೇಜಿನ ಪ್ರಾಂಶುಪಾಲರ ಬಳಿ ಅನುಮತಿ ಪತ್ರ ಮತ್ತು ವಿದ್ಯಾರ್ಥಿಗಳ ಕಾಲೇಜಿನ ಗುರುತಿನ ಪತ್ರ ತರಬೇಕು. ನೋಂದಣಿಗಾಗಿ ಸಂಪರ್ಕಿಸಿ: ಪ್ರತಿಭಾ 9110659511, ತೇಜ– 7760019257

"ಡಾ. ಶ್ರೀ ಶ್ರೀ ಶಿವಕುಮಾರ ಸ್ವಾಮೀಜಿಯವರ ಅಧ್ಯಯನ ಪೀಠ ಸ್ಥಾಪಿಸಿ"

ಹನ್ನೆರಡನೇ ಶತಮಾನದ ಶರಣರ ದಾಸೋಹ ಪರಿಕಲ್ಪನೆಗೆ ವಿಶೇಷ ಅರ್ಥವನ್ನು ನೀಡಿದ ಶ್ರೀ ಸಿದ್ಧಗಂಗಾ ಮಠದ ಡಾ. ಶ್ರೀ ಶ್ರೀ ಶಿವಕುಮಾರ ಸ್ವಾಮಿಗಳು ತಮ್ಮ ಮಠವನ್ನು ಅನ್ನ, ಅಕ್ಷರ, ಆಶ್ರಯ ದಾಸೋಹದ ಪ್ರಯೋಗ ಶಾಲೆಯನ್ನಾಗಿ ಮಾಡಿ ಲಕ್ಷಾಂತರ ಬಡ ವಿದ್ಯಾರ್ಥಿಗಳ ಬಾಳಿಗೆ ಬೆಳಕಾಗಿ ಇಡೀ ಜಗತ್ತೇ ತುಮಕೂರಿನ ಕಡೆಗೆ ತಿರುಗಿ ನೋಡುವಂತೆ ಮಾಡಿದ ಸ್ವಾಮೀಜಿಯವರ ಹೆಸರಿನಲ್ಲಿ ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಅಧ್ಯಯನ ಪೀಠವೊಂದನ್ನು ಸ್ಥಾಪಿಸಿ ಸಂಶೋಧನೆ ನಡೆಯುವಂತಾಗಬೇಕು ಈ ನಿಟ್ಟಿನಲ್ಲಿ ತುಮಕೂರು ವಿಶ್ವವಿದ್ಯಾಲಯ ಕ್ರಮ ವಹಿಸಬೇಕು ಎಂದು ಇತಿಹಾಸ ಸಂಶೋಧಕ ಡಾ. ಡಿ ಎನ್ ಯೋಗೀಶ್ವರಪ್ಪ ಒತ್ತಾಯಿಸಿದರು.

ಅವರು ಹೆಗ್ಗೆರೆಯಲ್ಲಿ ಡಾ. ಶ್ರೀ ಶ್ರೀ ಶಿವಕುಮಾರ ಸ್ವಾಮೀಜಿ ಬಡಾವಣೆಯ ನಾಗರೀಕ ವೇದಿಕೆ ಏರ್ಪಡಿಸಿದ್ದ ಶಿವಕುಮಾರ ಸ್ವಾಮಿಗಳ 119 ನೇ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತಾವು ಮಠಾಧ್ಯಕ್ಷರಾದ ಆರಂಭಿಕ ದಿನಗಳಲ್ಲಿ ಬಹಳ ಕಷ್ಟದ ದಿನಗಳನ್ನು ಕಂಡಿದ್ದ ಅವರು ತಮ್ಮ ಪೂಜಾ ನಿಷ್ಠೆಯ ಮೂಲಕ ಭಕ್ತ ಸಮುದಾಯವನ್ನು ಗಳಿಸಿಕೊಂಡು ಆ ಮೂಲಕ ಮಠವನ್ನು ಕಷ್ಟದಿಂದ ಪಾರು ಮಾಡಿದರು. ಗ್ರಾಮಾಂತರ ಪ್ರದೇಶಗಳಲ್ಲಿ ಬಿಕ್ಷಾಟನೆಯ ಮೂಲಕ ದವಸ ಧಾನ್ಯಗಳನ್ನು ಸಂಗ್ರಹಿಸಿ ದಾಸೋಹಕ್ಕೆ ಚ್ಯುತಿಯಾಗದಂತ ನೋಡಿಕೊಂಡರು ಇಡೀ ಸಮಾಜವನ್ನು ಸಾಕ್ಷರ ಸಮಾಜವನ್ನಾಗಿ ಮಾಡುವ ಉದ್ದೇಶದಿಂದ ಕರ್ನಾಟಕದ ಇತಿಹಾಸದಲ್ಲೇ ಮೊಟ್ಟಮೊದಲ ಬಾರಿಗೆ ವಸತಿ ಶಾಲೆಗಳನ್ನು ಸ್ಥಾಪಿಸಿದರು. ಅಂದು ಸರ್ಕಾರವೇ ಸಾರ್ವಜನಿಕ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಲು ಹಿಂಜರಿಯುತ್ತಿದ್ದ ಕಾಲದಲ್ಲಿ ಪೂಜ್ಯರು ಅಂತಹವುಗಳನ್ನು



ಸ್ಥಾಪಿಸಿ ಜಾತ್ಯಾತೀತ ಪರಿಕಲ್ಪನೆಯ ನಿಜವಾದ ರೂವಾರಿಗಳೆನಿಸಿಕೊಂಡರೆಂದು ನುಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಕ.ಸಾ.ಪ ಅಧ್ಯಕ್ಷರಾದ ಕೆ.ಎಸ್ ಸಿದ್ಧಲಿಂಗಪ್ಪನವರು ಮಾತನಾಡಿ ಪೂಜ್ಯರು ಈ ಜಗತ್ತು ಕಂಡ ಮಹಾನ್ ಸಂತರು ಮಹಾ ತಪಸ್ವಿಗಳು ಈ ಶತಮಾನದ ಜ್ಯೋತಿ ಸ್ವರೂಪರು ಗ್ರಾಮಾಂತರ ಪ್ರದೇಶಗಳಲ್ಲಿ ಕನ್ನಡ ಮಾಧ್ಯಮ ಪ್ರೌಢಶಾಲೆಗಳನ್ನು ಸ್ಥಾಪಿಸುವುದರ ಮೂಲಕ ಕನ್ನಡ ಪ್ರೇಮವನ್ನು ಮೆರೆದವರು ನಿತ್ಯ ಹದಿನೆಂಟು ಗಂಟೆಗಳ ಕಾಲ ಕಾಯಕ ಮಾಡುತ್ತಿದ್ದ ಸ್ವಾಮೀಜಿ ಆರಂಭದ ದಿನಗಳಲ್ಲಿ ಉಳುಮೆ ಮಾಡಿದ್ದಾರೆ ಕಲ್ಲು ಹೊಡೆದಿದ್ದಾರೆ ಅಡುಗೆ ಮಾಡಿದ್ದಾರೆ. ಎಲ್ಲ ಕಾಯಕವನ್ನು ಸಮಾನವಾಗಿಯೇ ನೋಡಿದ್ದ ಸ್ವಾಮೀಜಿಯವರು ದಾಸೋಹದ ಮೂಲಕ ದಾಸೋಹ ಚಕ್ರವರ್ತಿ ಎನಿಸಿಕೊಂಡರು ಜನ ಸಾಮಾನ್ಯರು ಅವರನ್ನು ನಡೆದಾಡುವ ದೇವರು ಎಂದು ಕರೆದರು ಇವರ ಸಮಕಾಲೀನರಾಗಿ ನಾವೆಲ್ಲ ಬದುಕಿದ್ದೇ ನಮ್ಮ ಪುಣ್ಯ ಎಂದು ತಮ್ಮ ಭಾವನೆಗಳನ್ನು ವ್ಯಕ್ತಪಡಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಎಂ ಜಿ ಸಿದ್ಧರಾಮಯ್ಯನವರು ಮಾತನಾಡಿ ಪೂಜ್ಯ ಡಾ ಶಿವಕುಮಾರ ಸ್ವಾಮಿಗಳು ಪೂಜ್ಯರಿಗೆ ಶರಣರು ಬದುಕಿದ ಕಾಯಕ ದಾಸೋಹಗಳೇ ಉಸಿರು ಭಕ್ತ ಸಮುದಾಯದ ನೋವಿಗೆ ಸ್ಪಂದಿಸುವ ಕಾರುಣ್ಯ ಅವರದು ಎಂದ ಅವರು ಆರಂಭದಲ್ಲಿ ಕೇವಲ ಇಪ್ಪತ್ತು ವಿದ್ಯಾರ್ಥಿಗಳಿಗೆ ಆಶ್ರಯ ನೀಡಿದ್ದ ಸಿದ್ಧಗಂಗಾ ಮಠದಲ್ಲಿ ಹತ್ತು ಸಾವಿರ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿ ಜಗತ್ತೇ ನಿಬ್ಬೆರಗಾಗುವಂತೆ ಮಾಡಿದ ಸಾಧನೆ ಪೂಜ್ಯರದು ಶಿಕ್ಷಣದ ಬಗ್ಗೆ ಅಪಾರ ಆಸಕ್ತಿ ಇಟ್ಟುಕೊಂಡಿದ್ದ ಪೂಜ್ಯರ ತಮ್ಮ ಜೀವಿತಾವಧಿಯಲ್ಲಿ 125 ಶಾಲಾ ಕಾಲೇಜುಗಳನ್ನು ಸ್ಥಾಪಿಸಿ ಸಮಾಜವನ್ನು ಸಾಕ್ಷರ ಸಮಾಜವನ್ನಾಗಿ ಮೊದಲು ಪ್ರಯತ್ನಿಸಿದರು ಎಂದರು.

ವೇದಿಕೆಯಲ್ಲಿ ತುಮಕೂರು ತಾಲ್ಲೂಕು ಕ.ಸಾ.ಪ ಅಧ್ಯಕ್ಷ ಚಿಕ್ಕ ಬೆಳ್ಳಾವಿ ಶಿವಕುಮಾರ ಉಪಾಧ್ಯಕ್ಷ ಪ್ರೊ. ಶಶಿಕುಮಾರ ಹಾಜರಿದ್ದರು.

ಹೆಗ್ಗೆರೆ ಗ್ರಾಮಪಂಚಾಯ್ತಿ ಮಾಜಿ ಸದಸ್ಯ ವೀರಭದ್ರಸ್ವಾಮಿ ಸ್ವಾಗತಿಸಿದರು ನಾಗರೀಕ ವೇದಿಕೆಯ ಸದಸ್ಯ ಶಿವಕುಮಾರ ವಂದಿಸಿದರು ಹೆಗ್ಗೆರೆಯ ನಾಗರೀಕ ವೇದಿಕೆಯ ಮಹಿಳೆಯರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು ಹೆಗ್ಗೆರೆ ಗ್ರಾಮಪಂಚಾಯ್ತಿ ಮಾಜಿ ಸದಸ್ಯರು ಗೆಳೆಯರ ಬಳಗ ಸದಸ್ಯರು ಶಿವಕುಮಾರ ಸ್ವಾಮೀಜಿ ಬಡಾವಣೆ ಸದಸ್ಯರೆಲ್ಲ ಪಾಲ್ಗೊಂಡಿದ್ದರು.

ಭಾರತದ ಸಂವಿಧಾನವೇ ಸಮಾನತೆಯ ತಳಪಾಯ: ಡಾ. ಶ್ರೀಧರ್



ತಿಪಟೂರು: ವಿಭಿನ್ನ ಆಚಾರ-ವಿಚಾರಗಳನ್ನು ಹೊಂದಿರುವ ಭಾರತದಲ್ಲಿ ಸಂವಿಧಾನವೇ ಸಮಾನತೆಯ ಅಡಿಪಾಯವಾಗಿದ್ದು, ದೇಶದ ಪ್ರತಿಯೊಬ್ಬ ನಾಗರಿಕರೂ ಸಂವಿಧಾನವನ್ನು ಗೌರವಿಸಬೇಕು ಎಂದು ಕುಮಾರ್ ಆಸ್ಪತ್ರೆಯ ಖ್ಯಾತ ವೈದ್ಯರಾದ ಡಾ. ಶ್ರೀಧರ್ ಹೇಳಿದರು.

ನಗರದ ಗಾಂಧೀನಗರ ಪೊಲೀಸ್ ಚೌಕಿ ವೃತ್ತದಲ್ಲಿ ಮುಸ್ಲಿಂ ಸಮಾಜದ ವತಿಯಿಂದ ಆಯೋಜಿಸಲಾದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದಅವರು ಮಾತನಾಡಿ ಭಾರತವು ಬಹುಸಂಸ್ಕೃತಿಯ ದೇಶವಾಗಿದ್ದು, ಇಲ್ಲಿ ನೂರಾರು ಜಾತಿ, ಧರ್ಮ ಹಾಗೂ ಮತಪಂಥಗಳಿವೆ. ವ್ಯಕ್ತಿಗತ ಆಚರಣೆಗಳಿಗೆ ಅವಕಾಶ ನೀಡಿದರೂ, ದೇಶದ ಸಂವಿಧಾನ ಎಲ್ಲರಿಗೂ ಸಮಾನವಾಗಿ ಬದುಕುವ ಹಕ್ಕನ್ನು ನೀಡಿದೆ. ಆದ್ದರಿಂದ ಪ್ರತಿಯೊಬ್ಬರೂ ಸಂವಿಧಾನವನ್ನು ಗೌರವಿಸಿ, ಅದರ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು,

ಅಂಬೇಡ್ಕರ್ ಅವರನ್ನು ಕೇವಲ ಭಾವಚಿತ್ರಕ್ಕೆ ಸೀಮಿತಗೊಳಿಸದೇ, ಅವರ ಸಿದ್ಧಾಂತಗಳನ್ನು ಅಳವಡಿಸಿಕೊಳ್ಳುವುದು ಮುಖ್ಯ ಎಂದು ತಿಳಿಸಿದರು.

ಬಿಲಾಲ್ ಮಸೀದಿಯ ಮುತ್ತವಲ್ಲಿ ಷಫಿ ಉಲ್ಲಾ ಶರೀಫ್ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ವಿಶ್ವಶ್ರೇಷ್ಠ ಜ್ಞಾನಿಯಾಗಿದ್ದು, ಅನೇಕ ದೇಶಗಳ ಸಂವಿಧಾನಗಳನ್ನು ಅಧ್ಯಯನ ಮಾಡಿ ಭಾರತದ ವಿಭಿನ್ನತೆಯಲ್ಲಿ ಏಕತೆಯನ್ನು ಸಾರುವ ಸಂವಿಧಾನವನ್ನು ನೀಡಿದ್ದಾರೆ

ದೇಶದ ಸಂವಿಧಾನವನ್ನು ಪ್ರತಿಂಯೊಬ್ಬ ಭಾರತೀಯ ಗೌರವಿಸಬೇಕು ಹಾಗೂ ಜೀವನದಲ್ಲಿ ಸಂವಿಧಾನಿಕ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು,

ಮುಸ್ಲಿಂ ಸಮಾಜವು ತಮ್ಮ ಮಕ್ಕಳಿಗೆ ಹೆಚ್ಚಿನ ಶಿಕ್ಷಣ ನೀಡುವತ್ತ ಗಮನ ಹರಿಸಬೇಕು. ಶಿಕ್ಷಣದಿಂದಲೇ ಸಮಾಜದಲ್ಲಿ ಬದಲಾವಣೆ ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಾಮಿಯಾ ಮಸೀದಿಯ ಮುತ್ತವಲ್ಲಿ ಸಲೀಂ, ಬಿಲಾಲ್ ಮಸೀದಿಯ ಮುತ್ತವಲ್ಲಿ ಷಫಿವುಲ್ಲಾ ಶರೀಫ್, ಮದೀನಾ ಮಸೀದಿಯ ಮುತ್ತವಲ್ಲಿ ದಸ್ತಗೀರ್, ನಗರಸಭೆಯ ಮಾಜಿ ಸದಸ್ಯ ನಯೀಮ್, ಗೌಸ್, ಶಾಬುದ್ದೀನ್, ಸೈಫುಲ್ಲಾ, ಡಿ.ಕೆ. ಅಲಿಂ, ಜಾವೇದ್, ಲೇತ್ ಅಜ್ಮತ್, ಇಮ್ರಾನ್, ತೌಫಿಕ್, ಇರ್ಫಾನ್, ಪರ್ವೇಜ್ ಪಿ.ಎನ್. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಚುನಾವಣೆ 9 ಮಹಿಳಾ ಸದಸ್ಯರು ಸೇರಿ26 ಜನ ಶಿಕ್ಷಕರು ಅವಿರೋಧ ಆಯ್ಕೆ

ತುಮಕೂರು- ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತುಮಕೂರು ತಾಲೂಕು ಘಟಕಕ್ಕೆ ನಡೆದ ಚುನಾವಣೆಯಲ್ಲಿ 9 ಮಹಿಳಾ ಸದಸ್ಯರು ಸೇರಿದಂತೆ 26 ಜನ ಶಿಕ್ಷಕರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತುಮಕೂರು ತಾಲೂಕು ಘಟಕದ ಚುನಾವಣೆಗೆ ತಾಲೂಕು ಚುನಾವಣಾಧಿಕಾರಿಗಳು, ಡಯಟ್‌ನ ನಿವೃತ್ತ ಉಪನ್ಯಾಸಕರಾದ ಕೆ.ಕೃಷ್ಣಮೂರ್ತಿ ಅವರು 10 ಏಪ್ರಿಲ್ 2026 ರಂದು ಅಧಿಸೂಚನೆ ಹೊರಡಿಸಿದ್ದರು.ಏಪ್ರಿಲ್ 14ರ ಮಂಗಳವಾರ ಚುನಾವಣಾ ಪ್ರಕ್ರಿಯೆಗಳು ನಡೆದಿದ್ದು,9 ಮಹಿಳಾ ಮೀಸಲು ಸೇರಿದಂತೆ ಒಟ್ಟು 26 ಸ್ಥಾನಗಳಿಗೆ ತಲಾ ಒಬ್ಬರೇ ನಾಮಪತ್ರ ಸಲ್ಲಿಸಿದ ಹಿನ್ನೆಲೆಯಲ್ಲಿ ನಾಮಪತ್ರ ಸಲಿಸಿರುವ ಅಷ್ಟೂ ಸ್ಥಾನಗಳ ಸದಸ್ಯರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಕೆ.ಕೃಷ್ಣಮೂರ್ತಿ ಘೋಷಿಸಿದ್ದಾರೆ.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತುಮಕೂರು ತಾಲೂಕು ಘಟಕದ ಅಧ್ಯಕ್ಷರಾದ ಪಿ.ಜಿ.ತಿಮ್ಮೇಗೌಡ, ಸರಕಾರಿ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿ ಆರ್.ಪರಮೇಶ್,ನಿಕಟಪೂರ್ವ



ಕಾರ್ಯದರ್ಶಿ ಕೆ.ನಾಗರಾಜು ಅವರ ನೇತೃತ್ವದಲ್ಲಿ ತಾಲೂಕು ಘಟಕಕ್ಕೆ ಸ್ಪರ್ಧಿಸಲು ಬಯಸಿದ್ದ ಎಲ್ಲಾ ಶಿಕ್ಷಕ ಬಂಧುಗಳನ್ನು ಒಂದೆಡೆ ಕಲೆ ಹಾಕಿ, ಅವರ ನಡುವೆ ಒಮ್ಮತ ಮೂಡುವಂತೆ ಮಾಡಿ, ಅವಿರೋಧ ಆಯ್ಕೆಗೆ ಬೇಕಾದ ವೇದಿಕೆ ಸಿದ್ದಪಡಿಸಿದ ಹಿನ್ನೆಲೆಯಲ್ಲಿ ಆಯ್ಕೆಂಯಾಗಬೇಕಿದ್ದ 26 ಸ್ಥಾನಗಳಿಗೆ ಒಬ್ಬೊಬ್ಬರೇ ನಾಮಪತ್ರ ಸಲ್ಲಿಸಿದ ಕಾರಣ 26 ಜನ ಸದಸ್ಯರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತುಮಕೂರು ತಾಲೂಕು ಘಟಕಕ್ಕೆ ಆಯ್ಕೆಂಯಾದ ನೂತನ ಸದಸ್ಯರುಗಳ ವಿವರ ಇಂತಿದೆ.

ಸಾಮಾನ್ಯ ಕ್ಷೇತ್ರದಿಂದ:ದಿನೇಶ್ ಪಿ.ಎನ್.ಸಹ ಶಿಕ್ಷಕರು ಚಿಕ್ಕಸಾರಂಗಿ, ಹರೀಶ್ ಕೆ.ವಿ,ಸಹಶಿಕ್ಷಕರು ಹರಳೂರು, ಹರೀಶ್‌ಕುಮಾರ್.ಬಿ.ದೈಹಿಕ ಶಿಕ್ಷಣ ಶಿಕ್ಷಕರು ಕೋರ, ಜಗದೀಶ್.ಕೆ.ಹೆಚ್, ಸಹಶಿಕ್ಷಕರು ಬಳ್ಳಗೆರೆ, ಜಯರಾಮ್ ಕೆ.ವಿ. ಸಹಶಿಕ್ಷಕರು ಭೈರಾಪುರ, ಲೋಕೇಶ್, ಟಿ.ಹೆಚ್, ಸಹಶಿಕ್ಷಕರು ವಡ್ಡರಪಾಳ್ಯ, ಮಲ್ಲಿಕಾರ್ಜುನಯ್ಯ ಹೆಚ್.ಆರ್. ಸಹಶಿಕ್ಷಕರು ಹೆಗ್ಗೆರೆ, ಮಹಮದ್ ಫೈರೋಜ್ ಸಹಶಿಕ್ಷಕರು ಕೋರ, ನಾಗರಾಜು.ಕೆ. ಸಹ ಶಿಕ್ಷಕರು ಬಿಸಿಲಹಳ್ಳಿ, ನಾಗರಾಜು. ಕೆ.ವಿ. ಸಹಶಿಕ್ಷಕರು ಗೋವಿಂದರಾಜಪುರ, ಪದ್ಮರಾಜು.ಡಿ. ಸಹಶಿಕ್ಷಕರು ಮಹಿಮನಪಾಳ್ಯ, ಪರಮೇಶ್.ಸಹಶಿಕ್ಷಕರು ಹೆತ್ತೇನಹಳ್ಳಿ ಪಾಳ್ಯ,ಸತೀಶ್ ಸಹಶಿಕ್ಷಕರು ಯಲ್ಲಾಪುರ, ಸಿದ್ದರಾಜು.ಕೆ.ಆರ್, ಸಹಶಿಕ್ಷಕರು ಗೇರಹಳ್ಳಿ, ಶ್ರೀನಿವಾಸ್.ಟಿ. ಸಹಶಿಕ್ಷಕರು ಕುಚ್ಚಂಗಿಪಾಳ್ಯ,ಶಿವಕುಮಾರ್.ಸಿ. ಸಹಶಿಕ್ಷಕರು ಅಣ್ಣೇನಹಳ್ಳಿ,ತಿಮ್ಮೇಗೌಡ ಪಿ.ಸಹಶಿಕ್ಷಕರು ಉತ್ತರಬಡಾಣೆ ತುಮಕೂರು.ಮಹಿಳಾ ಮೀಸಲು ಕ್ಷೇತ್ರ:ಜಯಲಕ್ಷ ?ಮಮ್ಮ ಡಿ. ಸಹಶಿಕ್ಷಕಿ ಯಲ್ಲಾಪುರ, ಕೋಮಲ ಆರ್. ಸಹಶಿಕ್ಷಕಿ ಕ್ಯಾತ್ಸಂದ್ರ,ಮಂಗಳ ಗೌರಮ್ಮ ಹೆಚ್.ಎನ್.ಸಹಶಿಕ್ಷಕಿ ಕೊಟ್ಟನಹಳ್ಳಿ, ಮಂಜುಳ ಕೆ.ಎ. ಸಹಶಿಕ್ಷಕಿ ಹನುಮಂತನಗರ, ಮಹಬೂಬ್ ಬಿ.ಸಹಶಿಕ್ಷಕಿ ಗೇರಹಳ್ಳಿ,ನಂದಿನಿ.ಎಸ್.ವಿ, ಸಹಶಿಕ್ಷಕಿ ಕೈದಾಳ, ಸವಿತ.ಆರ್. ಸಹಶಿಕ್ಷಕಿ ಚಿಕ್ಕಹೊಸೂರು, ಸಂಗೀತ.ಡಿ, ಸಹಶಿಕ್ಷಕಿ ಗೂಳರಿವೆ,ಶಾಂತಕುಮಾರಿ.ಕೆ.ಟಿ. ಸಹಶಿಕ್ಷಕಿ ಪಶ್ಚಿಮ ಬಡಾವಣೆ ತುಮಕೂರು. ಅವಿರೋಧವಾಗಿ ಆಯ್ಕೆಯಾದ ಎಲ್ಲಾ ಶಿಕ್ಷಕರನ್ನು ಬಿ.ಇ.ಓ ಹನುಮಂತಪ್ಪ ಹೂ ಗುಚ್ಚ ನೀಡಿ ಅಭಿನಂದಿಸಿರು

ಕ್ಯಾನ್ಸರ್ ನಿರ್ಲಕ್ಷಿಸಬೇಡಿ ಸೂಕ್ತ ಸಮಯದಲ್ಲಿ ಸೂಕ್ತ ತಪಾಸಣೆ ಮುಖ್ಯ

ತುಮಕೂರು: ಕ್ಯಾನ್ಸರ್ ಖಾಯಿಲೆಯನ್ನು ಯಾರೂ ಸಹ ನಿರ್ಲಕ್ಷಿಸಬಾರದು,ಸೂಕ್ತ ಸಮಯದಲ್ಲಿ ಸೂಕ್ತ ಆರೋಗ್ಯ ತಪಾಸಣೆಯನ್ನು ತಜ್ಞವೈದ್ಯರುಗಳಿಂದ ಪಡೆದರೆ ಕ್ಯಾನ್ಸರ್ ನ್ನು ಗುಣಪಡಿಸಬಹುದು,ನಿರ್ಲಕ್ಷಿಸಿದರೆ ಜೀವಕ್ಕೆ ತೊಂದರೆ ಇರುತ್ತದೆ,ಇಂದಿನ ದಿನಗಳಲ್ಲಿ ಹೆಣ್ಣುಮಕ್ಕಳು ಗರ್ಭಕಂಠದ ಕ್ಯಾನ್ಸರ್ ನಿಂದ ಬಳಲುತ್ತಿದ್ದಾರೆ,ಹೆಣ್ಣು ಮಕ್ಕಳು ಖಾಯಿಲೆಗಳನ್ನು ಮುಚ್ಚಿಡಬಾರದು ತಜ್ಞ ವೈದ್ಯರುಗಳಿಂದ ತಪಾಸಣೆ ಮಾಡಿಸಿಕೊಂಡು ಅವರಿಂದ ಮಾರ್ಗದರ್ಶನ ಪಡೆದರೆ ಖಾಯಿಲೆಗಳನ್ನು ಹೊಡೆದೋಡಿಸಬಹುದು,ಎಲ್ಲರೂ ಸಹ ವರ್ಷಕ್ಕೊಮ್ಮೆ ವೈದ್ಯರಿಂದ ತಪಾಸಣೆಗೆ ಒಳಗಾಗಬೇಕು ಆಗ ಆರೋಗ್ಯ ಉತ್ತಮ ಸ್ಥಿತಿಯಲ್ಲಿರುತ್ತದೆ ಎಂದು ಕರ್ನಾಟಕ ಕ್ಯಾನ್ಸರ್ ಸೊಸೈಟಿ ಕಾರ್ಯದರ್ಶಿ ನಾಗರತ್ನರವರು ತಿಳಿಸಿದರು.

ಅವರು ಇಂದು ಜಿಲ್ಲಾ ಬ್ರಾಹ್ಮಣ ಸಭಾ ತುಮಕೂರು ಹಾಗೂ ಬೆಂಗಳೂರಿನ ಕರ್ನಾಟಕ ಕ್ಯಾನ್ಸರ್ ಸೊಸೈಟಿ ಇವರುಗಳ ಸಹಯೋಗದಲ್ಲಿ ನಗರದ 31ನೇ ವಾರ್ಡ್‌ನ ಜಯನಗರ ಪಶ್ಚಿಮದಲ್ಲಿರುವ ವಿಪ್ರಭವನದಲ್ಲಿ ಉಚಿತ ಕ್ಯಾನ್ಸರ್ ಹಾಗೂ ಗರ್ಭ ಕೋಶದ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.



ಅಧ್ಯಕ್ಷತೆ ವಹಿಸಿ ಮಾತನಾಡಿದ ತುಮಕೂರು ಜಿಲ್ಲಾ ಬ್ರಾಹ್ಮಣಸಭಾದ ಅಧ್ಯಕ್ಷರಾದ ಹೆಚ್.ಎಂ. ಚಂದ್ರಶೇಖರ್‌ಹೆಬ್ಬಾಳ್ ರವರು ಕ್ಯಾನ್ಸರ್ ಒಂದು ಪಿಡುಗಾಗಿ ಹೊರಹೊಮ್ಮುತ್ತಿದೆ, ದಿನೇ ದಿನೇ ದೇಶದಲ್ಲಿ ಕ್ಯಾನ್ಸರ್ ರೋಗಿಗಳ ಸಂಖ್ಯೆ ಹೆಚ್ಚುತ್ತಿದೆ,ಎಲ್ಲರೂ ಉತ್ತಮ ಅಭ್ಯಾಸಗಳನ್ನು ರೂಢಿಸಿಕೊಳ್ಳಬೇಕು,ತಂಬಾಕು,ಬೀಡಿ ಸಿಗರೇಟುದಂತಹ ವ್ಯಸನಗಳಿಂದ ದೂರವಿರಬೇಕು ಆಗ ಕ್ಯಾನ್ಸರ್ ಬರುವುದಿಲ್ಲ,ಕ್ಯಾನ್ಸರ್ ಒಂದು ಮಾರಣಾಂತಿಕ ಖಾಯಿಲೆ ಆಗಿದೆ ಈ ನಿಟ್ಟಿನಲ್ಲಿ ಇಂದು ಜಿಲ್ಲಾ ಬ್ರಾಹಣ ಮಹಾಸಭಾ ಮತ್ತು ಕರ್ನಾಟಕ ಕ್ಯಾನ್ಸರ್ ಸೊಸೈಟಿ ಜಂಟಿಯಾಗಿ ಉಚಿತ ಕ್ಯಾನ್ಸರ್ ಹಾಗೂ ಗರ್ಭಕೋಶ ತಪಾಸಣಾ ಶಿಬಿರವನ್ನು ಮಾಡುತ್ತಿದ್ದೇವೆ ನಗರದ ಎಲ್ಲ ಸಾರ್ವಜನಿಕರು ಇದನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಸಿದ್ಧಾರ್ಥ ಮೆಡಿಕಲ್ ಕಾಲೇಜ್ ವೈದ್ಯರಾದ ಡಾ.ದೀಪಶ್ರೀ ಹಾಗೂ ಡಾ. ಅರವಿಂದ್ ಕ್ಯಾನ್ಸರ್ ಗೆ ಸಂಬಂಧಪಟ್ಟ ಸೂಕ್ಷ್ಮವಾದ ವಿಷಯಗಳನ್ನು ಸಭೆಗೆ ತಿಳಿಸಿದರು.

ವೇದಿಕೆಯಲ್ಲಿ ಅಧ್ಯಕ್ಷರಾದ ನಾಗರಾಜ್, ಮಾಜಿ ಪಾಲಿಕೆ ಸದಸ್ಯರಾದ ಸಿ.ಎನ್.ರಮೇಶ್, ಪ್ರಧಾನ ಕಾರ್ಯದರ್ಶಿಗಳಾದ ಡಿ.ಎಸ್ ಹರೀಶ,ಬ್ರಾಹ್ಮಣ ಸಭಾದ ನಿರ್ದೇಶಕರುಗಳಾದ ಅನಂತರಾಮ್, ಶ್ರೀನಿವಾಸ್, ಪದ್ಮನಾಭ ಶ್ರೀಮತಿ ಛಾಯಾ, ಶ್ರೀಮತಿ ಮಂಜುಳಾ,ಸೇವಾಕರ್ತೃಗಳಾದ ಚೇತನ್ ಕುಮಾರ್,ನಾಗೇಂದ್ರ, ಹರೀಶ್.ಶ್ರೀಮತಿ ಗೀತಾನಾಗೇಶ್, ರಾಮಪ್ರಸಾದ್ ಉಪಸ್ಥಿತರಿದ್ದರು.

ಟಿ.ಎಸ್.ಮಂಜುನಾಥ್ ಸ್ವಾಗತಿಸಿದರು, ಚಂದ್ರಶೇಖರ್ ನಿರೂಪಿಸಿದರು.

ಅಂಬೇಡ್ಕರ್ ಅವರು ಸಾಮಾಜಿಕ ನ್ಯಾಯಕ್ಕಾಗಿ ನಡೆಸಿದ ಹೋರಾಟ ಪ್ರತಿಯೊಬ್ಬರಿಗೂ ಸ್ಫೂರ್ತಿ



ತುಮಕೂರು: "ಡಾ. ಬಿ.ಆರ್. ಅಂಬೇಡ್ಕರ್ ಅವರು ಇಡೀ ರಾಷ್ಟ್ರದ ಆಸ್ತಿ ಮತ್ತು ಜಾಗತಿಕ ಮಟ್ಟದ ಶ್ರೇಷ್ಠ ಚಿಂತಕರು. ಸಮಾನತೆ, ಶಿಕ್ಷಣ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಅವರು ನಡೆಸಿದ ಹೋರಾಟ ಪ್ರತಿಯೊಬ್ಬರಿಗೂ ಸ್ಫೂರ್ತಿಯಾಗಿದೆ" ಎಂದು ಸಿದ್ಧಗಂಗಾ ವೈದ್ಯಕೀಯ ಕಾಲೇಜಿನ ನಿರ್ದೇಶಕರಾದ ಡಾ. ಎಸ್. ಪರಮೇಶ್ ತಿಳಿಸಿದರು.

ನಗರದ ಸಿದ್ಧಗಂಗಾ ಮೆಡಿಕಲ್ ಕಾಲೇಜ್ ಮತ್ತು ಸಂಶೋಧನಾ ಸಂಸ್ಥೆ ವತಿಯಿಂದ ನಡೆದ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿ "ಜ್ಞಾನದ ಮೂಲಕ ಸಬಲೀಕರಣ ಸಾಧಿಸಬಹುದು ಎಂಬುದು ಅಂಬೇಡ್ಕರ್ ಅವರ ಬಲವಾದ ನಂಬಿಕೆಯಾಗಿತ್ತು. ಇಂದಿನ ವೈದ್ಯಕೀಯ ವಿದ್ಯಾರ್ಥಿಗಳು ಮತ್ತು ವೃತ್ತಿಪರರು ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ನೈತಿಕತೆಯೊಂದಿಗೆ ಸಮಾಜದ ಸೇವೆಯಲ್ಲಿ ತೊಡಗಿಸಿಕೊಳ್ಳುವ ಮೂಲಕ ಅವರಿಗೆ ನಿಜವಾದ ಗೌರವ ಸಲ್ಲಿಸಬೇಕು" ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕಾಲೇಜಿನ ಆವರಣದಲ್ಲಿ ಸಂವಿಧಾನ ಶಿಲ್ಪಿಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಗೌರವ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ವೈದ್ಯರು, ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಮಕ್ಕಳಲ್ಲಿರುವ ಪ್ರತಿಭೆಯನ್ನು ಹೊರ ತರಲು ಬೇಸಿಗೆ ಶಿಬಿರ ಉತ್ತಮ ವೇದಿಕೆ: ನೂರುನ್ನೀಸ

ಬೇಸಿಗೆ ಕಾಲದಲ್ಲಿ ಹೆಚ್ಚಿನ ಬಿಸಿಲಿರುವ ಕಾರಣ ಮಕ್ಕಳನ್ನು ಆಚೆ ಆಟವಾಡಲು ಬಿಡಲು ಸಾಧ್ಯಾವಾಗುತ್ತಿಲ್ಲ. ಇದರಿಂದ ಮಕ್ಕಳು ಮನೆಯಲ್ಲೇ ಉಳಿದು ಮೊಬೈಲ್‌ನ್ನು ಹೆಚ್ಚಾಗಿ ಬಳಸುತ್ತಿದ್ದಾರೆ. ಮಕ್ಕಳ ಕೈಯಲ್ಲಿರುವ ಮೊಬೈಲ್‌ನ್ನು ಪೋಷಕರು ತೆಗೆದುಕೊಂಡರೆ ಮಕ್ಕಳಿಗೆ ಸಿಟ್ಟು, ಜಿಗುಪ್ಸೆ, ಹಠ ಮಾಡುವುದು ಕಂಡುಬರುತ್ತಿದೆ. ಮೊಬೈಲ್ ಬಳಕೆಯನ್ನು ಕಡಿಮೆ ಮಾಡಲು ಮತ್ತು ಮಕ್ಕಳನ್ನು ಚಟುವಟಿಕೆಯಿಂದ ಇರುವಂತೆ ಮಾಡಲು ಬೇಸಿಗೆ ಶಿಬಿರಗಳಿಗೆ ಕಳುಹಿಸಬೇಕು ಎಂದು ತುಮಕೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸದಸ್ಯ ಕಾರ್ಯದರ್ಶಿ, ಹಿರಿಯ ಸಿವಿಲ್ ನ್ಯಾಯಾಧೀಶರಾದ ನೂರುನ್ನೀಸ ರವರು ತಿಳಿಸಿದರು.

ರಾಜ್ಯ ಬಾಲಭವನ ಸೊಸೈಟಿ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಗೂ ಜಿಲ್ಲಾ ಬಾಲಭವನ ಸಮಿತಿ(ರಿ) ತುಮಕೂರು ರವರ ಸಹಭಾಗಿತ್ವದಲ್ಲಿ 2026-27ನೇ ಸಾಲಿನಲ್ಲಿ 05 ರಿಂದ 16ರ ವಯೋಮಾನದ ಮಕ್ಕಳಿಗಾಗಿ ಏಪ್ರಿಲ್ 15 ರಿಂದ ಏಪ್ರಿಲ್ 29 ರವರೆಗೆ ಪ್ರತಿ ದಿನ ಬೆಳಿಗ್ಗೆ-10:00 ರಿಂದ ಸಂಜೆ-4:00 ಗಂಟೆಯವರೆಗೆ 15 ದಿನಗಳ "ಬೇಸಿಗೆ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬೇಸಿಗೆ ಶಿಬಿರವನ್ನು ಜಿಲ್ಲಾ ಬಾಲಭವನ ವತಿಯಿಂದ ಆಯೋಜಿಸಿದ್ದು, ಈ ಬೇಸಿಗೆ ಶಿಬಿರದಲ್ಲಿ ಕರಾಟೆ/ ಚಿತ್ರಕಲೆ, ಕರಕುಶಲತೆ, ವರ್ಲಿಆರ್ಟ್, ಮುಖವಾಡ ತಯಾರಿಕೆ/ ಯಕ್ಷಗಾನ ನೃತ್ಯ ಪ್ರದರ್ಶನ/ಸಮೂಹ ನೃತ್ಯ/ ನಾಟಕ ಈ ರೀತಿಯ ವಿವಿಧ ಚಟುವಟಿಕೆಗಳನ್ನು ಒಳಗೊಂಡಿರುವುದರಿಂದ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಕಾರಣವಾಗುತ್ತದೆ ಹಾಗೂ ಮಕ್ಕಳಲ್ಲಿರುವ ಪ್ರತಿಭೆಯನ್ನು ಹೊರ



ತರಲು ಬೇಸಿಗೆ ಶಿಬಿರವು ಎರಡನೇ ವೇದಿಕೆಯಾಗಿದೆ. ಈ ಬೇಸಿಗೆ ಶಿಬಿರದಲ್ಲಿ ಬೆಳಿಗ್ಗೆ-10:00 ಗಂಟೆಯಿಂದ ಸಂಜೆ-4:00 ಯವರೆಗೆ ಚಟುವಟಿಕೆಗಳು ಇರುವುದರಿಂದ ಮಕ್ಕಳನ್ನು ಮೊಬೈಲ್ ಗೀಳಿನಿಂದ ಹೊರತರಲು ಇದೊಂದು ಸುವರ್ಣ ಅವಕಾಶವೆಂದು ಹೇಳಬಹುದು. ಸರ್ಕಾರಿ ನೌಕರಿಯಲ್ಲಿರುವ ಪೋಷಕರಿಗೆ ಮಕ್ಕಳ ರಜೆ ಒಂದು ಸಜೆಯಾಗಿರುತ್ತದೆ. ಆದರೆ ಅವರುಗಳಿಗೆ ಇಂತಹ ಬೇಸಿಗೆ ಶಿಬಿರಗಳು ತುಂಬಾ ಅನುಕೂಲಕರವಾಗಿದೆ. ಹಿಂದೆ ಅವಿಭಕ್ತ ಕುಟುಂಬಗಳು ಜಾಸ್ತಿ ಇದ್ದು, ಮಕ್ಕಳನ್ನು ಅಜ್ಜಿ-ತಾತ, ಚಿಕ್ಕಪ್ಪ-ಚಿಕ್ಕಮ್ಮ ಹೀಗೆ ಊರುಗಳಿಗೆ ಕಳುಹಿಸಲಾಗುತ್ತಿತ್ತು. ಆದರೆ ಈಗ ವಿಭಕ್ತ ಕುಟುಂಬಗಳು ಜಾಸ್ತಿಯಾಗಿರುವ ನಿಟ್ಟಿನಲ್ಲಿ ಇಂತಹ ಬೇಸಿಗೆ ಶಿಬಿರಗಳು ಮಕ್ಕಳಿಗೆ ಸೂಕ್ತವಾಗಿದೆ. ಮಕ್ಕಳನ್ನು ಬೇಸಿಗೆ ಶಿಬಿರಕ್ಕೆ ಬೆಳಗ್ಗೆ ಮತ್ತು ಸಂಜೆ ಕರೆದುಕೊಂಡು ಬರುವುದು ಮತ್ತು ಹೋಗುವುದು ಪೋಷಕರ ಜವಬ್ದಾರಿಯಾಗಿರುವುದರಿಂದ ಯಾವುದೇ ತೊಂದರೆಯಾಗಲು ಆಸ್ಪದ ಇರುವುದಿಲ್ಲ. ಇದೊಂದು ಒಳ್ಳೆಯ ವ್ಯವಸ್ಥೆಯಾಗಿದೆ. ಈ ಬೇಸಿಗೆ ಶಿಬಿರಕ್ಕೆ ನಮ್ಮ ಇಬ್ಬರೂ ಮಕ್ಕಳನ್ನು ಸೇರಿಸಲಾಗಿದೆ. ಬೇಸಿಗೆ ಶಿಬಿರದ ಯಶಸ್ವಿಗೆ ಪೋಷಕರ ಸಹಕಾರ ಮುಖ್ಯವಾಗಿದೆ ಎಮದು ನೂರುನ್ನೀಸ ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉನಿರ್ದೇಶಕರು ಹಾಗೂ ಜಿಲ್ಲಾ ಬಾಲಭವನ ಸಮಿತಿ(ರಿ), ಕಾರ್ಯದರ್ಶಿಗಳಾದ ಡಾ॥ ಎಸ್. ಸಿದ್ದರಾಮಣ್ಣ ಮಾತನಾಡಿ ಬೇಸಿಗೆ ರಜೆಯಲ್ಲಿ ಮಕ್ಕಳು ಆದಷ್ಟು ಖುಷಿಯಾಗಿ, ಆಡುತ್ತಾ, ಕುಣಿಯುತ್ತಾ, ನೆಗುಯುತ್ತಾ ಕಾಲ ಕಳೆಯಬೇಕು. ಮಕ್ಕಳನ್ನು ಬೇಸಿಗೆ ರಜೆಯಲ್ಲಿ ಊರುಗಳಿಗೆ ಕಳುಹಿಸುವುದು ಮತ್ತು ಹಳ್ಳಿ ಸೊಗಡು ಆಟಗಳನ್ನು ಆಡುವುದು ಇತ್ತೀಚಿಗೆ ದಿನಗಳಲ್ಲಿ ಕಣ್ಮರೆಯಾಗುತ್ತಿದೆ. ನಗರ ಪ್ರದೇಶಗಳಲ್ಲಿ ಮಕ್ಕಳನ್ನು ಆಡವಾಡಲು ಆಚೆ ಕಳುಹಿಸಲು ಪೋಷಕರು ತುಂಬಾ ಭಯಪಡುವಂತಹ ಪರಿಸ್ಥಿತಿ ಎದುರಾಗಿದೆ. ಜಿಲ್ಲಾ ಬಾಲಭವನದಲ್ಲಿ 5 ರಿಂದ 16 ವರ್ಷದೊಳಗಿನ ಮಕ್ಕಳಿಗೆ ಕರಾಟೆ/ ಚಿತ್ರಕಲೆ, ಕರಕುಶಲತೆ, ವರ್ಲಿಆರ್ಟ್, ಮುಖವಾಡ ತಯಾರಿಕೆ/ ಯಕ್ಷಗಾನ ನೃತ್ಯ ಪ್ರದರ್ಶನ/ಸಮೂಹ ನೃತ್ಯ/ನಾಟಕ ಇಂತಹ ಚಟುವಟಿಕೆಗಳನ್ನು ಆಯೋಜಿಸಿದ್ದು, ಶಿಬಿರದಲ್ಲಿ ಭಾಗವಹಿಸಿದ ಎಲ್ಲಾ ಮಕ್ಕಳು ಇದರ ಸುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

"ಬೇಸಿಗೆ ಶಿಬಿರ"ವನ್ನು ಹಮ್ಮಿಕೊಳ್ಳಲಾಗಿದೆ ಎಂದು ತುಮಕೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಯಾದ ದಿನೇಶ್ ಆರ್.ಎಂ ರವರು ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಈ ಕಾರ್ಯಕ್ರಮದಲ್ಲಿ ಶಿಬಿರಕ್ಕೆ ತರಬೇತುದಾರರುಗಳಾಗಿ ಪ್ರಕಾಶ್, ಕರಾಟೆ ಶಿಕ್ಷಕರು, ತುಮಕೂರು, ಸೌಮ್ಯ, ಚಿತ್ರಕಲೆ ಶಿಕ್ಷಕರು, ತುಮಕೂರು, ಚೇತನ್, ನೃತ್ಯ ಶಿಕ್ಷಕರು, ತುಮಕೂರು, ಕಾಂತರಾಜು, ರಂಗ ನಿರ್ದೇಶಕರು, ಕೌತಮಾರನಹಳ್ಳಿ, ತುಮಕೂರು ಮತ್ತು ಮಮತ ಪಿ, ಕಾರ್ಯಕ್ರಮ ಸಂಯೋಜಕರು, ಶಿಲ್ಪ ಜಿ.ಎಸ್, ಕಾರ್ಯಕ್ರಮ ಸಹಾಯಕರು, ಜಿಲ್ಲಾ ಬಾಲಭವನ ಸಮಿತಿ, ತುಮಕೂರು, ಶಿಬಿರದಲ್ಲಿ ಭಾಗವಹಿಸಿದ ಮಕ್ಕಳು ಹಾಗೂ ಪೋಷಕರು ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

ವಿಶ್ವಕರ್ಮ ವಧು–ವರರ ಸಮಾವೇಶ ಸದುಪಯೋಗಪಡಿಸಿಕೊಳ್ಳಿ : ಜನಾರ್ದನ್



ರಾಮನಗರ : ವಿಶ್ವಕರ್ಮ ಮಹಾಸಭಾದ ರಾಜ್ಯಾಧ್ಯಕ್ಷ ಕೆ.ಪಿ.ನಂಜುಂಡಿ ಅವರ ನೇತೃತ್ವದಲ್ಲಿ ಏ.24ರಿಂದ ಮೂರು ದಿನಗಳವರೆಗೆ ಬೆಂಗಳೂರಿನಲ್ಲಿ ರಾಜ್ಯಮಟ್ಟದ ವಿಶ್ವಕರ್ಮ ವಧು–ವರರ ಅನ್ವೇಷಣಾ ಸಮಾವೇಶ ನಡೆಯಲಿದೆ. ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸದುಪಯೋಗ ಪಡೆಸಿಕೊಳ್ಳಬೇಕು ಎಂದು ವಿಶ್ವಕರ್ಮ ಮುಖಂಡ, ಯೂತ್ ಕಾಂಗ್ರೆಸ್ ಉಪಾಧ್ಯಕ್ಷ ಜನಾರ್ದನ್ ತಿಳಿಸಿದರು.

ನಗರದ ಚೈತನ್ಯ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ವಿಶ್ವಕರ್ಮ ಜನತೆಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಈ ವಧು–ವರರ ಸಮಾವೇಶ ಆಯೋಜಿಸಲಾಗಿದೆ. ಕರ್ನಾಟಕ ವಿಶ್ವಕರ್ಮ ಮಹಾಸಭಾದ ರಾಜ್ಯ ಘಟಕದ ಅಧ್ಯಕ್ಷ ಕೆ.ಪಿ.ನಂಜುಂಡಿ ಅವರ ಸಾರಥ್ಯದಲ್ಲಿ ಮೂರು ದಿನ ವಧು–ವರರ ಅನ್ವೇಷಣೆ ನಡೆಯಲಿದೆ. ಈ ಸಮಾವೇಶಕ್ಕೆ ಬರುವವರಿಗೆ ಉಚಿತವಾಗಿ ಅಗತ್ಯ ಸೌಲಭ್ಯ ಒದಗಿಸಲಾಗುತ್ತಿದೆ. ಸಮಾಜದ ವಧು▯ವರರು ಹಾಗೂ ಪೋಷಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಬೆಂಗಳೂರಿನ ಗುರುರಾಜ ಕಲ್ಯಾಣ ಮಂಟಪದಲ್ಲಿ ಏ.24ರಿಂದ ಏ.26ರವರೆಗೆ ನಡೆಯಲಿರುವ ವಿಶ್ವಕರ್ಮ ವಧು▯ವರರ ಸಮಾವೇಶ ಮೂರನೇ ಬಾರಿ ನಡೆಯುತ್ತಿದೆ. ಈಗಾಗಲೇ ಕೆ.ಪಿ. ನಂಜುಂಡಿಯವರ ನೇತೃತ್ವದಲ್ಲಿ ಎರಡು ಬಾರಿ ಸಮಾವೇಶ ಯಶಸ್ವಿಯಾಗಿದೆ. ಮೂರು ದಿನಗಳ ಕಾಲವೂ ಊಟ,ತಿಂಡಿ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಯಾವುದೇ ಶುಲ್ಕ ಇಲ್ಲದೇ ಒದಗಿಸಲಾಗುತ್ತದೆ. ಸಮಾವೇಶದಲ್ಲಿ ರಾಜ್ಯದಾದ್ಯಂತದಿಂದ ಸಮಾಜದ ಸಾವಿರಾರು ವಧು–ವರರು ಭಾಗವಹಿಸುವ ನಿರೀಕ್ಷೆ ಇದೆ ಎಂದು ಹೇಳಿದರು.

ರಾಜ್ಯದ ಎಲ್ಲಾ ಜಿಲ್ಲೆಯ ವಿಶ್ವಕರ್ಮ ವಧು–ವರರು ಭಾಗವಹಿಸಲಿದ್ದು, ಅರ್ಜಿಗಳನ್ನು ಈಗಾಗಲೇ ಜನಾಂಗದ ಗ್ರೂಪ್ ಗಳ ಮೂಲಕ ಅರ್ಜಿ ವಿತರಣೆ ಮಾಡಲಾಗಿದೆ. ಕದಲೂರು ಬಸವರಾಜ್ ಅವರು ಈ ಸಮಾವೇಶದ ಮೇಲುಸ್ತುವಾರಿ ನೋಡಿಕೊಳ್ಳಲಿದ್ದಾರೆ. ವಿಶ್ವಕರ್ಮ ಜನಾಂಗದವರನ್ನ ಬೆಸೆಯಲಿರುವ ವಧು–ವರರ ಅನ್ವೇಷಣಾ ಕಾರ್ಯಕ್ರಮವು ಏ.24 ರಂದು ಬೆಳಿಗ್ಗೆ 11ಕ್ಕೆ ಆರಂಭವಾಗಲಿದೆ. ವಿಶ್ವಕರ್ಮ ಸಮಾಜ ಹಿಂದುಳಿದಿದ್ದು ಸಮಾಜದ ಏಳಿಗೆಗಾಗಿ ರಾಜ್ಯ ವಿಶ್ವಕರ್ಮ ಮಹಾಸಭಾ ರಾಜ್ಯಾಧ್ಯಕ್ಷ ಕೆ.ಪಿ. ನಂಜುಂಡಿ ಅವರು ಶ್ರಮಿಸುತ್ತಾ ಬಂದಿದ್ದಾರೆ. ಸಮಾಜದ ಜನರಿಗೆ ಅನುಕೂಲವಾಗಲೆಂದು ವಧೂ–ವರರ ಅನ್ವೇಷಣೆ ಕಾರ್ಯಕ್ರಮ ನಡೆಸುತ್ತಿದ್ದಾರೆ ಎಂದರು.

ಸಂವಿಧಾನದ ಆಶಯವನ್ನು ಅರ್ಥೈಸಿಕೊಳ್ಳಬೇಕಿದೆ : ಶಿವಶಂಕರ್



ರಾಮನಗರ: ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಮಹಾಜ್ಞಾನಿ, ತಮ್ಮ ಬದುಕನ್ನು ಶೋಷಿತರ ಏಳಿಗೆಗೆ ಮೀಸಲಾಗಿಟ್ಟರು. ಅಂಬೇಡ್ಕರ್ ಅವರ ಜೀವನ ಮತ್ತು ಸಂವಿಧಾನದ ಆಶಯಗಳನ್ನು ಎಲ್ಲರು ತಿಳಿದುಕೊಳ್ಳಬೇಕು ಎಂದು ದಲಿತ ಸಂಘರ್ಷ ಸಮಿತಿ(ಭೀಮವಾದ) ಜಿಲ್ಲಾ ಸಂಚಾಲಕ ಕೆ.ಶಿವಶಂಕರ್ ತಿಳಿಸಿದರು.

ತಾಲ್ಲೂಕಿನ ಹೊಂಬಯ್ಯನದೊಡ್ಡಿಯಲ್ಲಿ ಆಯೋಜಿಸಿದ್ದ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಡಾ॥ ಬಿ.ಆರ್.ಅಂಬೇಡ್ಕರ್ ಅವರು ಕೇವಲ ಭಾರತ ದೇಶದಲ್ಲಷ್ಟೇ ಅಲ್ಲದೆ ವಿಶ್ವದ ಅನೇಕ ರಾಷ್ಟ್ರಗಳಲ್ಲಿ ಅಪಾರ ಗೌರವಕ್ಕೆ ಪಾತ್ರರಾಗಿದ್ದಾರೆ. ಹಲವು ದೇಶಗಳಲ್ಲಿ ಅವರ ಪ್ರತಿಮೆಗಳನ್ನು ನಿರ್ಮಿಸಲಾಗಿದೆ ಎಂಬುದು ಅವರ ಮಹತ್ವವನ್ನ ತಿಳಿಸುತ್ತದೆ ಎಂದರು.

ಅಂಬೇಡ್ಕರ್ ಅವರು ಎಲ್ಲಾ ದಮನಿತರ, ಪರಿಶಿಷ್ಟ ವರ್ಗಗಳ, ಶೋಷಿತರ, ಅವಕಾಶ ವಂಚಿತ ಜನರ ಪರವಾಗಿ ಹೋರಾಟವನ್ನು ತಮ್ಮ ಜೀವನದುದ್ದಕ್ಕೂ ಮಾಡಿದ್ದರು. ಶಿಕ್ಷಣವೇ ಶಕ್ತಿ ಎಂಬುದನ್ನು ಅಂಬೇಡ್ಕರ್ ಅವರು ಪ್ರತಿಪಾದಿಸಿದ್ದರು. ಕೇವಲ ದಲಿತರ ನಾಯಕರಾಗಿರದೆ ಅವಕಾಶ ವಂಚಿತರ, ದೌರ್ಜನ್ಯಕ್ಕೆ ಒಳಗಾದ ಎಲ್ಲರ ಪರವಾಗಿ ಹೋರಾಟ ಮಾಡಿದ್ದರು ಎಂದು ಹೇಳಿದರು.

ಶಿಕ್ಷಕ ಎಚ್.ಸಿ.ಗಿರೀಶ್ ಮಾತನಾಡಿ, ಶಿಕ್ಷಣ, ಸಂಘಟನೆ ಮತ್ತು ಹೋರಾಟ ಎಂಬುದು ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನದ ಧ್ಯೇಯವಾಗಿತ್ತು. ಮಹಾನ್ ಜ್ಞಾನಿಯಾಗಿದ್ದ ಅವರು ಶಿಕ್ಷಣದಿಂದ ಬದಲಾವಣೆಯನ್ನು ಮಾಡಬಹುದೆಂಬ ಸಂದೇಶವನ್ನು ಸಾರಿದರು. ಪ್ರಪಂಚದಾದ್ಯಂತ ಅನೇಕ ರಾಷ್ಟ್ರಗಳು ಇಂದು ಅವರ ಹುಟ್ಟುಹಬ್ಬವನ್ನು ಆಚರಿಸುತ್ತಿವೆ. ಅಂಬೇಡ್ಕರ್ ಕೇವಲ ಭಾರತ ರತ್ನವಲ್ಲ, ಅವರು ವಿಶ್ವರತ್ನ ಎಂದರು.

ಸಂವಿಧಾನ ಸಮಸ್ತ ಜನತೆಗೆ ಮಾರ್ಗದರ್ಶನ ಗ್ರಂಥ. ಇದರಿಂದ ಎಲ್ಲರೂ ಸಮಾನತೆಯಿಂದ ಜೀವನ ಮಾಡಲು ಸಾಧ್ಯವಾಗಿದೆ. ನಾವು ಅಂಬೇಡ್ಕರ್ ಅವರನ್ನು ಆಚರಣೆ ಮಾಡಿದರೆ ಸಾಲದು ಅವರನ್ನು ಅನುಸರಣೆ ಮಾಡಬೇಕು. ನಾವೆಲ್ಲರೂ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಸದಾ ಸ್ಮರಿಸಿಕೊಂಡು ಅವರ ಆದರ್ಶ, ಚಿಂತನೆ, ವಿಚಾರಧಾರೆಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಶಾಂಕ್, ಸಂಜಯ್‌ಕುಮಾರ್, ಪ್ರದೀಪ್, ಸುದೀಪ್, ಪ್ರೇಮ್‌ಕುಮಾರ್, ಸೃಜನ ಕುಮಾರ್ ಪ್ರಸನ್ನ, ಪ್ರಮೋದ್, ಸುಮಂತ್, ಹೇಮಂತ್, ಗುರುಬಸಪ್ಪ, ಅಭಿಷೇಕ್, ಸಾಗರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇಂಡಿಯಾ ಸ್ಕಿಲ್ಸ್ ರಾಷ್ಟ್ರೀಯ ಸ್ಪರ್ಧೆಯಲ್ಲಿ 9 ಪದಕಗಳೊಂದಿಗೆ ಮಿಂಚಿದ ಟೊಯೊಟಾ ಕಿರ್ಲೋಸ್ಕರ್ ಮೋಟಾರ್

ರಾಮನಗರ: ಟೊಯೊಟಾ ಕಿರ್ಲೋಸ್ಕರ್ ಮೋಟಾರ್ (ಟಿಕೆಎಂ) ಇಂಡಿಯಾ ಸ್ಕಿಲ್ಸ್ ರಾಷ್ಟ್ರೀಯ ಸ್ಪರ್ಧೆ 2026 ರಲ್ಲಿ ತನ್ನ ಸಮೂಹ ವಿಜೇತರನ್ನು ಘೋಷಿಸಿದೆ. ಈ ಗೆಲುವು ಕೌಶಲ್ಯದ ಉತ್ಕೃಷ್ಟತೆ ಮತ್ತು ಯುವಜನರ ಸಬಲೀಕರಣಕ್ಕೆ ಅದರ ನಿರಂತರ ಬದ್ಧತೆಯಲ್ಲಿನ ಒಂದು ಮಹತ್ವದ ಮೈಲಿಗಲ್ಲಾಗಿದೆ.

ಟಿಕೆಎಂ ಸ್ಪರ್ಧಿಗಳು ರಾಷ್ಟ್ರಮಟ್ಟದಲ್ಲಿ ಏಳು ಕೌಶಲ್ಯ ವಿಭಾಗಗಳಲ್ಲಿ ಒಟ್ಟು 5 ಚಿನ್ನ, 3 ಬೆಳ್ಳಿ ಮತ್ತು 1 ಕಂಚಿನ ಪದಕಗಳನ್ನು ಪಡೆದರು. ವೃತ್ತಿಪರ ಉತ್ಕೃಷ್ಟತೆಗಾಗಿನ ಭಾರತದ ಪ್ರಮುಖ ವೇದಿಕೆಯಾದ ಇಂಡಿಯಾ ಸ್ಕಿಲ್ಸ್ 2025–26 ಜಿಲ್ಲಾ, ವಲಯ, ರಾಜ್ಯ ಮತ್ತು ಪ್ರಾದೇಶಿಕ ಮಟ್ಟಗಳಲ್ಲಿ ಪ್ರಗತಿ ಸಾಧಿಸಿ ರಾಷ್ಟ್ರಮಟ್ಟದಲ್ಲಿ ಕೊನೆಗೊಂಡ ದೇಶಾದ್ಯಂತ ಇರುವ ಅತ್ಯುತ್ತಮ ಪ್ರತಿಭೆಗಳ ಭಾಗವಹಿಸುವಿಕೆಗೆ ಸಾಕ್ಷಿಯಾಯಿತು,.

ಈ ಹಂತಗಳಲ್ಲಿ ಟಿಕೆಎಂನ ಸ್ಥಿರವಾದ ಕಾರ್ಯಕ್ಷಮತೆಯು ಕೌಶಲ್ಯ ಅಭಿವೃದ್ಧಿಯಲ್ಲಿ ಅದರ ರಚನಾತ್ಮಕ ವಿಧಾನವನ್ನು ಮತ್ತು ಜಾಗತಿಕ ಮಾನದಂಡಗಳಿಗೆ ಹೊಂದಿಕೆಯಾಗುವ ಭವಿಷ್ಯಕ್ಕೆ ಸಿದ್ಧವಾದ ಕಾರ್ಯಪಡೆಯನ್ನು ನಿರ್ಮಿಸುವತ್ತ ಅದು ವಹಿಸುವ ಗಮನವನ್ನು ಪ್ರತಿಬಿಂಬಿಸುತ್ತದೆ.

ರಾಷ್ಟ್ರಮಟ್ಟದಲ್ಲಿ, ಟಿಕೆಎಂನ 14 ತಂಡದ ಸದಸ್ಯರು ಏಳು ಕೌಶಲ್ಯಗಳಲ್ಲಿ ಭಾಗವಹಿಸಿದ್ದರು, ಹಾಗೂ ಸ್ಪರ್ಧೆಗಳು ದೆಹಲಿ, ಬೆಂಗಳೂರು ಮತ್ತು ಚೆನ್ನೈನಲ್ಲಿ ನಡೆದವು.



ಮೆಕಾಟ್ರಾನಿಕ್ಸ್ ವಿಭಾಗದಲ್ಲಿ ದೀಪು ಎಂ.ಎಸ್., ಜಯಂತ್ ಕೆ ಚಿನ್ನ ಗೆದ್ದರೆ, ಗಣೇಶ್ ಪಿ.ಬಿ.ಮತ್ತು ಪುನಿತ್ ಕುಮಾರ್ ಅದೇ ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದರು.

ರೊಬೊಟಿಕ್ ಸಿಸ್ಟಮ್ ಇಂಟಿಗ್ರೇಷ ನಲ್ಲಿ ಶಶಾಂಕ್ ಎಸ್. ಮತ್ತು ಅಭಿಷೇಕ್ ಎಸ್. ಚಿನ್ನ ಗೆದ್ದರೆ, ಚಿರಾಗ್ ಜಿ. ಮತ್ತು ವಿನಯ್ ಎಂ.ಎಚ್. ಬೆಳ್ಳಿ ಗೆದ್ದರು. ಸಂಯೋಜಕ ಉತ್ಪಾದನೆಯಲ್ಲಿ ಪವನ್ ಬಿ ಎಸ್ ಚಿನ್ನ ಮತ್ತು ಹರ್ಷಿತ್ ಕೆ ಬಿ ಬೆಳ್ಳಿ ಗೆದ್ದರು.

ಆಟೋ ಬಾಡಿ ರಿಪೇರಿಯಲ್ಲಿ ತೇಜಸ್ ಬಿ. ಎಸ್. ಚಿನ್ನ ಗೆದ್ದರೆ, ಪುನಿತ್ ಪಿ. ಮೆಕ್ಯಾನಿಕಲ್ ಎಂಜಿನಿಯರಿಂಗ್ ಸಿಎಡಿಯಲ್ಲಿ ಚಿನ್ನ ಗೆದ್ದರು. ವೆಲ್ಡಿಂಗ್ ನಲ್ಲಿ ಪ್ರವೀಣ್ ವೈ.ಎಚ್. ಕಂಚಿನ ಪದಕ ಗೆದ್ದರು.

ಗ್ರಾಮೀಣ ಯುವಕರನ್ನು ವಿಶ್ವದರ್ಜೆಯ ತಂತ್ರಜ್ಞರನ್ನಾಗಿ ಪರಿವರ್ತಿಸುವ ಉದ್ದೇಶದಿಂದ, ಟಿಕೆಎಂ ಸುಧಾರಿತ ತರಬೇತಿ ಮೂಲಸೌಕರ್ಯ, ಉದ್ಯಮ–ಸಂಬಂಧಿತ ಪಠ್ಯಕ್ರಮ ಮತ್ತು ಜಾಗತಿಕ ಉತ್ತಮ ಪದ್ಧತಿಗಳಲ್ಲಿ ಹೂಡಿಕೆ ಮಾಡುವುದನ್ನು ಮುಂದುವರಿಸಿದೆ. ಇಂಡಿಯಾ ಸ್ಕಿಲ್ಸ್ ಮತ್ತು ವರ್ಲ್ಡ್ ಸ್ಕಿಲ್ಸ್ ವೇದಿಕೆಗಳಲ್ಲಿ ಟಿಕೆಎಂನ ಸಕ್ರಿಯ ಭಾಗವಹಿಸುವಿಕೆಯು ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾಗಿಸಬಲ್ಲ ಪ್ರತಿಭೆಗಳನ್ನು ಪೋಷಿಸುವ ಅದರ ದೀರ್ಘಕಾಲೀನ ದೃಷ್ಟಿಕೋನವನ್ನು ಒತ್ತಿಹೇಳುತ್ತದೆ.

ಟೊಯೊಟಾ ಕಿರ್ಲೋಸ್ಕರ್ ಮೋಟಾರ್ ನ ಮುಖ್ಯ ಕಾರ್ಯತಂತ್ರ ಅಧಿಕಾರಿ ಜಿ. ಶಂಕರ್ ಈ ಸಾಧನೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ ಮಾತನಾಡಿ

"ಟೊಯೊಟಾದಲ್ಲಿ, ಉತ್ಪಾದನಾ ಶ್ರೇಷ್ಠತೆಯು ಅಸಾಧಾರಣ ಪ್ರತಿಭೆಗಳನ್ನು ಪೋಷಿಸುವುದರೊಂದಿಗೆ ಪ್ರಾರಂಭವಾಗುತ್ತದೆ ಎಂದು ನಾವು ನಂಬುತ್ತೇವೆ. ಈ ಪ್ರತಿಷ್ಠಿತ ಕಾರ್ಯಕ್ರಮಗಳಲ್ಲಿ ಟಿಕೆಎಂ ಭಾಗಿಗಳ ಗಮನಾರ್ಹ ಪ್ರದರ್ಶನವು ವೈವಿಧ್ಯಮಯ ಕೌಶಲ್ಯ ವಿಭಾಗಗಳಲ್ಲಿ ಉತ್ಕೃಷ್ಟತೆಯನ್ನು ಸಾಧಿಸುವ ಮತ್ತು ಉನ್ನತ ಮಟ್ಟದಲ್ಲಿ ಭಾಗವಹಿಸುವ ಅವರ ಸಾಮರ್ಥ್ಯವನ್ನು ಪ್ರತಿಬಿಂಬಿಸುತ್ತದೆ. ಅವರ ಸಾಧನೆಗಳು ಸ್ಕಿಲ್ ಇಂಡಿಯಾ ಮಿಷನ್ ನ ಸ್ಫೂರ್ತಿಯನ್ನು ಸಾಕಾರಗೊಳಿಸುತ್ತವೆ. ಯುವಕರನ್ನು ಸಬಲೀಕರಣಗೊಳಿಸುವುದು, ಸೃಜನಶೀಲತೆಯನ್ನು ಪೋಷಿಸುವುದು ಮತ್ತು ನಾವೀನ್ಯತೆಯನ್ನು ಉತ್ತೇಜಿಸುವುದು. ಅಂತಹ ಮೈಲಿಗಲ್ಲುಗಳೊಂದಿಗೆ, ಟಿಕೆಎಂ ಕೌಶಲ್ಯ ಅಭಿವೃದ್ಧಿಯಲ್ಲಿ ಹೊಸ ಮಾನದಂಡಗಳನ್ನು ನಿಗದಿಪಡಿಸುತ್ತಲೇ ಇದೆ ಮತ್ತು ಭಾರತದ ಬೆಳೆಯುತ್ತಿರುವ ಪ್ರತಿಭಾ ಭೂದೃಶ್ಯವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ" ಎಂದು ಹೇಳಿದರು.

ವಿಜೇತರು ಈಗ ಚೀನಾದ ಶಾಂಘೈನಲ್ಲಿ ಸೆಪ್ಟೆಂಬರ್ 22 ರಿಂದ 27, 2026 ರವರೆಗೆ ನಡೆಯಲಿರುವ ವಿಶ್ವ ಕೌಶಲ್ಯ ಸ್ಪರ್ಧೆ 2026 ರ ಅಂತಿಮ ಆಯ್ಕೆ ಸುತ್ತುಗಳಿಗೆ ತಯಾರಿ ನಡೆಸಲಿದ್ದಾರೆ. ವರ್ಲ್ಡ್ ಸ್ಕಿಲ್ಸ್ ಯುವ ವೃತ್ತಿಪರರಿಗೆ 60 ಕ್ಕೂ ಹೆಚ್ಚು ದೇಶಗಳ ಭಾಗವಹಿಸುವಿಕೆಯೊಂದಿಗೆ 65 ಕ್ಕೂ ಹೆಚ್ಚು ಕೌಶಲ್ಯಗಳಲ್ಲಿ ತಮ್ಮ ಪರಿಣತಿಯನ್ನು ಪ್ರದರ್ಶಿಸಲು ಜಾಗತಿಕ ವೇದಿಕೆಯನ್ನು ಒದಗಿಸುತ್ತದೆ.

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿನಿಗೆ ಜಿಲ್ಲಾಧಿಕಾರಿಗಳಿಂದ ಅಭಿನಂದನೆ



ರಾಮನಗರ, – 2026ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 591 ಅಂಕಗಳನ್ನು ಗಳಿಸಿದ ಹೋಲಿ ಕ್ರೆಸೆಂಟ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಅಲ್‌ಫಿಯಾ ನೂರೈನ್ ಅವರನ್ನು ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್ ಅವರು ಸನ್ಮಾನಿಸಿ ಗೌರವಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏ.15ರ ಬುಧವಾರ ವಿದ್ಯಾರ್ಥಿನಿ ಅಲ್‌ಫಿಯಾ ನೂರೈನ್ ಅವರನ್ನು ಅಭಿನಂದಿಸಿದ ಜಿಲ್ಲಾಧಿಕಾರಿಗಳು, ಪಿಯುಸಿ ಪರೀಕ್ಷೆಯು ಮುಂದಿನ ಭವಿಷ್ಯಕ್ಕೆ ಟರ್ನಿಂಗ್ ಪಾಯಿಂಟ್ ಆಗಿದ್ದು ಮುಂದಿನ ವ್ಯಾಸಂಗದ ದಿನಗಳಲ್ಲಿ ಉನ್ನತ ಶಿಕ್ಷಣದಲ್ಲಿಯೂ ಉನ್ನತ ಶ್ರೇಣಿಯಲ್ಲಿ ಸಾಧನೆ ಮಾಡಿ ಪೋಷಕರಿಗೆ ಹಾಗೂ ಗುರುಹಿರಿಯರಿಗೆ ಮತ್ತು ಜಿಲ್ಲೆಗೆ ಕೀರ್ತಿತರುವಂತೆ ಶುಭ ಹಾರೈಸಿದರು.

ಅಲ್‌ಫಿಯಾ ನೂರೈನ್ ವಿದ್ಯಾರ್ಥಿನಿ ಪಿಯುಸಿ ಪರೀಕ್ಷೆಯಲ್ಲಿ 600 ಅಂಕಗಳಿಗೆ 591 ಅಂಕ ಪಡೆದಿದ್ದು, ಹಿಂದಿ ಬಾಷೆಯಲ್ಲಿ–99, ಇಂಗ್ಲೀಷ್–96, ಭೌತಶಾಸ್ತ್ರ–100, ರಸಾಯನ ಶಾಸ್ತ್ರ–96, ಗಣಿತ–100 ಮತ್ತು ಜೀವಶಾಸ್ತ್ರದಲ್ಲಿ–100 ಅಂಕಗಳನ್ನು ಪಡೆದಿದ್ದಾರೆ. ರಾಜ್ಯದ 8ನೇ ರ್‍ಯಾಂಕ್, ಜಿಲೆಯಲ್ಲಿ 3ನೇ ಟಾಪರ್ ಹಾಗೂ ತಾಲ್ಲೂಕಿನಲ್ಲಿ 2ನೇ ಟಾಪರ್ ಆಗಿ ಸಾಧನೆ ಮಾಡಿದ್ದಾರೆ ಎಂದು ಕಾಲೇಜಿನ ಸಂಸ್ಥಾಪಕ ಕಾರ್ಯದರ್ಶಿ ಅಲ್ತಾಫ್ ಅಹಮದ್ ತಿಳಿಸಿದರು.

ಈ ಸಂದರ್ಭದಲ್ಲಿ ಹೋಲಿ ಕ್ರೆಸೆಂಟ್ ಸಮೂಹ ವಿದ್ಯಾಸಂಸ್ಥೆ ಆಡಳಿತ ಮಂಡಳಿಯ ಪ್ರೊ.ಡಾ.ಪ್ರಕ್ರುದ್ದೀನ್, ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಡಾ.ಶಾಜಿಯಾ, ಪ್ರಾಂಶುಪಾಲ ಸ್ಟಾನ್ಲಿಪಾಲ್, ಉಪ ಪ್ರಾಂಶುಪಾಲ ಅರುಣ್‌ಕುಮಾರ್ ಹಾಗೂ ವಿದ್ಯಾರ್ಥಿನಿಯ ಪೋಷಕರು ಇದ್ದರು.



ಶಿರಾ ತಾಲೂಕು ಬುಕ್ಕಾಪಟ್ಟಣ ಹೋಬಳಿಯ ಸುಬಾಬುಲ್ ರಂಗನಹಳ್ಳಿ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಡಾ. ಬಿಆರ್ ಅಂಬೇಡ್ಕರ್ ರವರ 135 ನೇ ಜನ್ಮದಿನಾಚರಣೆಯನ್ನು ಗ್ರಾಮದಲ್ಲಿ ಸಿಹಿ ಹಂಚಿ ಕೇಕ್ ಕತ್ತರಿಸುವ ಮೂಲಕ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ತಿಮ್ಮರಾಜು, ಹೇಮಂತರಾಜು, ಚಂದ್ರಶೇಖರ್,ನಾಗರಾಜು, ಇರ್ಫಾನ್,ಕೀರ್ತಿ,ಕುಮಾರ್ ಸೇರಿದಂತೆ ಗ್ರಾಮಸ್ಥರು ಅಂಬೇಡ್ಕರ್ ಅಭಿಮಾನಿಗಳು ಜೈ ಭೀಮ್ ಸಂಘಟನೆಯ ಪದಾಧಿಕಾರಿಗಳು ಸದಸ್ಯರು ಮುಖಂಡರುಗಳು ಹಾಜರಿದ್ದರು.



ಕುರುಬರಹಳ್ಳಿಯಲ್ಲಿ ಅದ್ದೂರಿ ಅಂಬೇಡ್ಕರ್ ಜಯಂತಿ

ಶಿರಾ ತಾಲೂಕು ಬುಕ್ಕಾಪಟ್ಟಣ ಹೋಬಳಿಯ ಕುರುಬರಹಳ್ಳಿ ಗ್ರಾಮದಲ್ಲಿ ಬಾಬಾ ಸಾಹೇಬ್ ಡಾ. ಬಿಆರ್ ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ಅದ್ದೂರಿಯಾಗಿಆಚರಿಸಲಾಯಿತು. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಕೇಕ್ ಕತ್ತರಿಸುವ ಮೂಲಕ ಆಚರಿಸಿದರು ಕಾರ್ಯಕ್ರಮದಲ್ಲಿ ಪೋಸ್ಟ್ ಈರಣ್ಣ, ಪತ್ರಿಕಾ ವಿತರಕ ಭೂತೇಶ್ ಕೆ ಇ, ಜಾನಕಲ್ ಬಸವರಾಜು, ಜೈ ಭೀಮ್ ಸಂಘಟನೆಯ ಪದಾಧಿಕಾರಿಗಳು ಗ್ರಾಮಸ್ಥರು ಹಾಜರಿದ್ದರು,

ಶೀಘ್ರದಲ್ಲೇ 74.5 ಕೋಟಿ ವೆಚ್ಚದಲ್ಲಿ ಜಿಟಿಟಿಸಿ ಕಾಲೇಜು ಪ್ರಾರಂಭ ಕೆ.ಎನ್. ರಾಜಣ್ಣ

ಮಧುಗಿರಿ : ತಾಲೂಕಿನಲ್ಲಿ 9.5 ಎಕರೆ ಭೂಮಿ ಮಂಜೂರಾಗಿದ್ದು, ಶೀಘ್ರದಲ್ಲೇ 74.5 ಕೋಟಿ ವೆಚ್ಚದಲ್ಲಿ ಜಿಟಿಟಿಸಿ ಕಾಲೇಜು ಪ್ರಾರಂಬಿಸಲಾಗುವುದು ಎಂದು ಮಾಜಿ ಸಚಿವ, ಶಾಸಕ ಕೆ.ಎನ್. ರಾಜಣ್ಣ ತಿಳಿಸಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಬುಧವಾರ ಕೆ.ಎನ್. ರಾಜಣ್ಣ ಮತ್ತು ರಾಜೇಂದ್ರ ರಾಜಣ್ಣ ರವರ ನೇತೃತ್ವದಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ತಾಲೂಕು ಆಡಳಿತ, ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಜಿಲ್ಲಾ ಮಟ್ಟದ ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಜಿಟಿಟಿಸಿ ಕಾಲೇಜು ಪ್ರಾರಂಭಕ್ಕೆ ಈಗಾಗಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಕಾಮಗಾರಿ ಪ್ರಾರಂಭವಾಗಲಿದ್ದು, ಇದರಿಂದ ಗ್ರಾಮೀಣ ಭಾಗದ ಬಡ ಕುಟುಂಬದ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶಗಳು ದೊರೆಯಲಿವೆ ಎಂದರು.

ಇದರ ಜೊತೆಗೆ ತಾಲೂಕಿನಲ್ಲಿ ಕೈಗಾರಿಕಾ ವಲಯ ಪ್ರಾರಂಭಿಸುವ ಬಗ್ಗೆ ಚಿಂತನೆ ನಡೆದಿದ್ದು, ನಾವು ಕೊಡಿಗೇನಹಳ್ಳಿ ಹೋಬಳಿಯ ತೆರಿಯೂರು ಬಳಿ ಕೈಗಾರಿಕಾ ವಲಯ ಪ್ರಾರಂಭಿಸಬೇಕು ಎಂಬ ಉದ್ದೇಶವಿತ್ತು. ಆದರೆ ಈ ಹಿಂದಿನ ಶಾಸಕರು ಬೆಲ್ಲದ ಮಡುಗು ಬಳಿ ಕೈಗಾರಿಕಾ ವಲಯಕ್ಕೆ ಜಮೀನು ಮಂಜೂರು ಮಾಡಿಸಿದ್ದು, ಮುಂದಿನ ದಿನಗಳಲ್ಲಿ ಯಾವುದಾದರೊಂದು ಸ್ಥಳದಲ್ಲಿ ಕೈಗಾರಿಕಾ ವಲಯ ಪ್ರಾರಂಭಕ್ಕೆ ಆದ್ಯತೆ ನೀಡಲಾಗುವುದು ಎಂದರು.





ಮಧುಗಿರಿಯಲ್ಲಿ ಇದೇ ಮೊದಲ ಬಾರಿಗೆ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದ್ದು, ಇದೊಂದು ಪುಣ್ಯದ ಕೆಲಸ. ಈ ಉದ್ಯೋಗ ಮೇಳದಲ್ಲಿ ಈಗಾಗಲೇ ಆನ್ ಲೈನ್ ನಲ್ಲಿ 2500 ಜನ ನೊಂದಣಿ ಮಾಡಿಕೊಂಡಿದ್ದು, ಸ್ಥಳದಲ್ಲೂ ನೊಂದಣಿಗೆ ಅವಕಾಶ ನೀಡಲಾಗಿದೆ. ಮಧುಗಿರಿ ಬರಪೀಡಿತ ಪ್ರದೇಶ. ಈ ಭಾಗದಲ್ಲಿ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲಾಗಿದೆ. ನಮ್ಮಲ್ಲಿರುವ ಹಾಸ್ಟೆಲ್ ಗಳು, ಕಾಲೇಜುಗಳು ಯಾವುದೇ ತಾಲೂಕಿನಲ್ಲೂ ಇಲ್ಲ. ವಿದ್ಯೆ ಸರ್ವಸ್ವವನ್ನೂ ನೀಡುತ್ತದೆ. ಶಿಕ್ಷಣ ಮನುಷ್ಯನಿಗೆ ಗೌರವ ಸ್ವಾಭಿಮಾನ ನೀಡುತ್ತದೆ. ಹಾಗಾಗಿ ನಾನು ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುತ್ತೇನೆ. ಈಗಾಗಲೇ ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಎಸ್.ಎಲ್.ಸಿ ವರೆಗಿನ ಎಲ್ಲಾ ಮಕ್ಕಳಿಗೂ ಉಚಿತ ನೋಟ್ ಪುಸ್ತಕ ನೀಡಲಾಗುತ್ತಿದ್ದು, ಜೂನ್ ತಿಂಗಳಿನಿಂದ ಅಂಗನವಾಡಿ ಮಕ್ಕಳಿಗೂ ಉಚಿತ ಸಮವಸ್ತ್ರ ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಸಹಕಾರ ಕ್ಷೇತ್ರದಲ್ಲಿ ರಾಜಣ್ಣನವರು ಮಾಡಿರುವ ಕೊಡುಗೆಗಳು ಯಾರೂ ಮಾಡಲು ಸಾಧ್ಯವಿಲ್ಲ. ಈ ಉದ್ಯೋಗ ಮೇಳದ ಯಶಸ್ಸಿಗೆ ಅನೇಕರು ಶ್ರಮ ವಹಿಸಿದ್ದಾರೆ. ಪ್ರಥಮ ಬಾರಿಗೆ ತಾಲೂಕಿನಲ್ಲಿ ಉದ್ಯೋಗ ಮೇಳ ಪ್ರಾರಂಭಿಸಲಾಗಿದೆ. 98 ಕಂಪನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಿದ್ದು, 1700 ಜನ ನೊಂದಣಿ ಮಾಡಿಕೊಂಡಿದ್ದು, 560 ಜನ ಉದ್ಯೋಗ ದೊರಕಿಸಿಕೊಂಡಿದ್ದಾರೆ. ಅಧಿಕಾರ ಯಾರಿಗೂ ಶಾಶ್ವತವಲ್ಲ. ಅಧಿಕಾರ ಇರಲಿ ಇಲ್ಲದಿರಲಿ ಪ್ರತೀ ವರ್ಷ ಉದ್ಯೋಗ ಮೇಳ ಆಯೋಜಿಸಲಾಗುವುದು ಇದರ ಜೊತೆಗೆ ಮುಂದಿನ ದಿನಗಳಲ್ಲಿ ಮಧ್ಯಾಹ್ನದ ಊಟದ ವ್ಯವಸ್ಥೆ ಜೊತೆಗೆ ಉಚಿತವಾಗಿ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಕೇಂದ್ರ ಸ್ಥಾಪನೆಗೂ ಕ್ರಮ ಕೈಗೊಳ್ಳಲಾಗುವುದು.

– ರಾಜೇಂದ್ರ ರಾಜಣ್ಣ, ವಿಧಾನ ಪರಿಷತ್ ಸದಸ್ಯ,

ಮುಖಂಡ ಹರ್ಷ ಕುರುಬರಹಳ್ಳಿ ಮಾತನಾಡಿ ಶಾಸಕ ಕೆ.ಎನ್. ರಾಜಣ್ಣನವರು ಹಾಗೂ ರಾಜೇಂದ್ರ ರಾಜಣ್ಣನವರ ಬಳಿ ಹಳ್ಳಿಗಾಡಿನ ಮಕ್ಕಳಿಗೆ ಉದ್ಯೋಗದ ಸಮಸ್ಯೆ ಬಗ್ಗೆಯೂ ತಾಲೂಕಿನ ಜನತೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಇಂದು ಯುವ ಜನತೆಗೆ ಉದ್ಯೋಗಾವಕಾಶ ಕಲ್ಪಿಸಿದ್ದು, ಖಾಸಗಿ ವಲಯದಲ್ಲೂ ಉದ್ಯೋಗಕ್ಕೆ ಬೇಡಿಕೆ ಬಂದಿದೆ. ವಿದ್ಯಾರ್ಥಿಗಳಿಗೆ ಉದ್ಯೋಗ ದೊರಕಿಸಿಕೊಡಲು ಉದ್ಯೋಗ ಮೇಳ ಆಯೋಜನೆ ಮಾಡುವ ಬಗ್ಗೆ ಎಂಎಲ್.ಸಿ ರಾಜೇಂದ್ರ ರವರ ಬಳಿ ಚರ್ಚಿಸಿದಾಗ, ಶಾಸಕ ರಾಜಣ್ಣನವರ ಗಮನಕ್ಕೆ ತಂದು ಉದ್ಯೋಗ ಮೇಳ ಆಯೋಜನೆ ಮಾಡಲಾಗಿದೆ. ಈ ಮೇಳದಲ್ಲಿ 95 ಕಂಪನಿಗಳು ಬಾಗವಹಿಸಿರುವುದು ಹೆಮ್ಮೆಯ ಸಂಗತಿ ಎಂದರು.

ಉದ್ಯೋಗ ಪಡೆದವರು ಹೇಳಿದ್ದೇನು..: ಶಾಸಕ ಕೆ.ಎನ್. ರಾಜಣ್ಣ ಮತ್ತು ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣನವರು ತಾಲೂಕಿನಲ್ಲಿ ಉದ್ಯೋಗ ಮೇಳ ಹಮ್ಮಿಕೊಂಡಿದ್ದರಿಂದ ನನಗೆ ಫಾಕ್ಸ್ ಕಾನ್ ಕಂಪನಿಯಲ್ಲಿ ಕೆಲಸ ದೊರೆತಿದ್ದು, ಇದರಿಂದ ನಮ್ಮ ಪೋಷಕರು ಬಹಳಷ್ಟು ಸಂತಸಗೊಂಡಿದ್ದಾರೆ.

– ವಂದಿತಾ, ಬಿಸಿಎ ವಿದ್ಯಾರ್ಥಿನಿ ಮಧುಗಿರಿ.

ಮಧುಗಿರಿ ತಾಲೂಕಿನಲ್ಲಿ ಇದೇ ಮೊದಲನೇ ಬಾರಿಗೆ ಬೃಹತ್ ಉದ್ಯೋಗ ಮೇಳ ಆಯೋಜಿಸಿದ್ದು, ಇಲ್ಲಿಗೆ ಉದ್ಯೋಗದ ನಿರೀಕ್ಷೆ ಇಟ್ಟು ಕೊಂಡು ಬಂದಿದ್ದ ನನಗೆ ಕಂಪನಿಯೊಂದರಲ್ಲಿ ಉದ್ಯೋಗ ದೊರೆತಿದ್ದು, ನನಗೆ ಉದ್ಯೋಗ ದೊರಕಿಸಿಕೊಟ್ಟ ಶಾಸಕ ಕೆ.ಎನ್. ರಾಜಣ್ಣನವರಿಗೆ ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣನವರಿಗೆ ಧನ್ಯವಾದಗಳು.

– ಸಂದ್ಯಾ, ಎಂಕಾಂ ವಿದ್ಯಾರ್ಥಿನಿ, ಮಧುಗಿರಿ.

ನಾನು ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದಾಗಲೂ ಉದ್ಯೋಗಕ್ಕಾಗಿ ಪಯತ್ನ ನಡೆಸಲಾಗಿತ್ತು. ಆದರೆ ಉದ್ಯೋಗ ದೊರೆತಿರಲಿಲ್ಲ. ದೂರದ ಬೆಂಗಳೂರಿಗೆ ತೆರಳಿ ಉದ್ಯೋಗಕ್ಕಾಗಿ ಸಂದರ್ಶನದಲ್ಲಿ ಭಾಗಿಯಾಗಲು ಬಹಳಷ್ಟು ವೆಚ್ಚವಾಗಲಿದೆ. ಮಧುಗಿರಿಯಲ್ಲಿ ಉದ್ಯೋಗ ಮೇಳ ಆಯೋಜನೆ ಮಾಡಿರುವುದನ್ನು ತಿಳಿದು ಇಲ್ಲಿಗೆ ಬಂದು ಸಂದರ್ಶನದಲ್ಲಿ ಬಾಗಿಯಾದಾಗ ನನಗೆ ಉದ್ಯೋಗ ದೊರೆತಿದೆ. ಇದಕ್ಕೆ ನಾನು ಶಾಸಕ ರಾಜಣ್ಣನವರಿಗೆ ಮತ್ತು ಎಂ.ಎಲ್.ಸಿ ರಾಜೇಂದ್ರ ರವರಿಗೆ ಧನ್ಯವಾದ ಹೇಳುತ್ತೇನೆ.

– ಚೈತನ್ಯ, ಎಂ.ಕಾಂ, ಮಧುಗಿರಿ.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಗೊಟೂರು ಶಿವಪ್ಪ, ತಹಶೀಲ್ದಾರ್ ಶ್ರೀನಿವಾಸ್, ಪುರಸಭೆ ಮಾಜಿ ಅಧ್ಯಕ್ಷರಾದ ಎಂ.ಕೆ.ನಂಜುಂಡಯ್ಯ, ಎನ್.ಗಂಗಣ್ಣ, ಲಾಲಾಪೇಟೆ ಮಂಜುನಾಥ್ , ಮುಖ್ಯಾಧಿಕಾರಿ ಸುರೇಶ್ , ಮಾಜಿ ಸದಸ್ಯರಾದ ಎಂ.ಶ್ರೀಧರ್, ಅಲೀಮ್ , ಮಂಜುನಾಥ್ ಆಚಾರ್, ಕಾಲೇಜು ಪ್ರಾಂಶುಪಾಲ ಪ್ರೊ.ಕುಮಾರ್ ಉಪನ್ಯಾಸಕ ಮಂಜುನಾಥ್, ನಿವೃತ್ತ ಪ್ರಾಂಶುಪಾಲ ಪ್ರೊ.ಮುನೀಂದ್ರ ಕುಮಾರ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಜಿ.ಜೆ. ರಾಜಣ್ಣ ,ನಿರ್ದೇಶಕ ನಾಗೇಶ್ ಬಾಬು, ಕೆಪಿಸಿಸಿ ಸದಸ್ಯ ಎಂ.ಎಸ್. ಮಲ್ಲಿಕಾರ್ಜುನಯ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಗೋಪಾಲಯ್ಯ, ಆಧಿನಾರಾಯಣ ರೆಡ್ಡಿ, ಸಿಂಡಿಕೇಟ್ ಸದಸ್ಯ ಶಿವಣ್ಣ, ಇತರರಿದ್ದರು.



ಸಿರಾ ತಾಲ್ಲೂಕು ಸೀಗಲಹಳ್ಳಿ ಗ್ರಾಮದಲ್ಲಿ ಸಂವಿದಾನ ಶಿಲ್ಪಿ ಡಾ.ಬಾಬಾ ಸಾಹೇಬ್ ಅಂಬೇಡ್ಕರರ 135ನೇ ಜಯಂತಿಯನ್ನು ಶ್ರದ್ಧ ಭಕ್ತಿಯಿಂದ ಅದ್ದೂರಿಯಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ರಾಕೇಶ್ ವಿಷ್ಣು, ಓಬಳೇಶ್, ರವಿ (ಬೆಣ್ಣೆ), ಸೀತರಾಮು, ಗಂಗೂಲಿ ಕಿಚ್ಚ ಗಂಗಣ್ಣ, ಯುವ ಮುಖಂಡ ನರಸಿಂಹಮೂರ್ತಿ, ಗ್ರಾಮಸ್ಥರಾದ ದಾಸಪ್ಪ, ಶಿವರಾಜು, ದೇವರಾಜು ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

ಛಾಯಾಚಿತ್ರ ಪ್ರದರ್ಶನ ಸ್ಟಾಲ್‌ಗೆ ಸಿಎಂ ಭೇಟಿ: ಅಪರೂಪದ ಸಂಗ್ರಹಕ್ಕೆ ಮೆಚ್ಚುಗೆ



ಬೀದರ್‌ನಲ್ಲಿ ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಅಂಗವಾಗಿ ಹಿರಿಯ ಪತ್ರಿಕಾ ಛಾಯಾಗ್ರಾಹಕ ಅನು ಶಾಂತರಾಜ್ ಏರ್ಪಡಿಸಿದ್ದ ಅಪರೂಪದ ಛಾಯಾಚಿತ್ರ ಪ್ರದರ್ಶನದ ಸ್ಟಾಲ್‌ಗೆ ಭೇಟಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ತುಮಕೂರಿನ ಕೊಬ್ಬರಿ ಮಿಠಾಯಿ ಸವಿದು, ಹಳೆಯ ಕಾಲದ ಕ್ಯಾಮೆರಾಗಳನ್ನು ವೀಕ್ಷಿಸಿ ಸಂತಸಪಟ್ಟರು. ಈ ವೇಳೆ ಸಚಿವರಾದ ಈಶ್ವರ್ ಖಂಡ್ರೆ, ರಹೀಮ್ ಖಾನ್, ಸಂಸದ ಸಾಗರ್ ಖಂಡ್ರೆ, ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಜಿಲ್ಲಾಧ್ಯಕ್ಷ ಆನಂದ ದೇವಪ್ಪ, ಜಿ.ಕೆ. ಕನ್ಷನ್ ಮಾಲೀಕ ಕೊಲ್ಲೂರು ಗುರುನಾಥ, ಪತ್ರಿಕಾ ಛಾಯಾಗ್ರಾಹಕ ರೇಣುಕಾ ಪ್ರಸಾದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



"ತಿಪಟೂರು: ತಾಲೂಕಿನ ಗಂಗನಘಟ್ಟ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಡಾಕ್ಟರ್ ಬಿ ಆರ್ ಅಂಬೇಡ್ಕರ್ ರವರ 135 ನೇ ಅಂಬೇಡ್ಕರ್ ಜಯಂತಿಯನ್ನು ಸೀಹಿ ಹಂಚುವುದರ ಮೂಲಕ ಆಚರಿಸಲಾಯಿತು ಇದೆ ವೇಳೆಯಲ್ಲಿ ಗ್ರಾಮದ ಮಹಿಳೆಯರು ಮಕ್ಕಳು ಯುವಕರು ಹಾಜರಿದ್ದರು "

ನಾಗರಕಟ್ಟೆ ದೇವಸ್ಥಾನದಲ್ಲಿ ಅಂಬೇಡ್ಕರ್ ಜಯಂತಿ



ತುಮಕೂರು: ಡಾ. ಭೀಮ್ ರಾವ್ ರಾಮ್ ಜಿ ಅಂಬೇಡ್ಕರ್ ರವರ 135ನೇ ಜಯಂತಿಯು ಬಿ ಜೆ ಎಸ್ ವೃತ್ತದ ನಾಗರಕಟ್ಟೆ ಗಣಪತಿ ದೇವಸ್ಥಾನದಲ್ಲಿ ಅದ್ದೂರಿಯಾಗಿ ನೆರವೇರಿತು. ಡಾ.ಬಿ.ಆರ್ ಅಂಬೇಡ್ಕರ್ ಮೂರ್ತಿಗೆ ಪೂಜ್ಯ ಸಂತರು ಮುಖಂಡರುಗಳು ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿದರು.

ಈ ಸಂದರ್ಭದಲ್ಲಿ ಪಾಲನಹಳ್ಳಿ ಮಠದ ಶ್ರೀ. ಶ್ರೀ. ಸಿದ್ದರಾಜು ಸ್ವಾಮೀಜಿ, ಶ್ರೀ ಕಾಶಿ ಅನ್ನಪೂರ್ಣೇಶ್ವರಿ ಮಠದ ಶ್ರೀ. ಶ್ರೀ. ಬಸವ ಮಹಾಲಿಂಗ ಸ್ವಾಮೀಜಿ, ಗೊಲ್ಲಹಳ್ಳಿ ಮಠದ ಶ್ರೀ. ಶ್ರೀ. ವಿಭವ ವಿದ್ಯಾ ಶಂಕರ ಸ್ವಾಮೀಜಿ, ಶಿಕಾರಿಪುರದ ಶ್ರೀ. ಶ್ರೀ. ಚನ್ನಬಸವೇಶ್ವರ ಸ್ವಾಮೀಜಿ ಹಾಗೂ ಮಾಜಿ ಸಚಿವರಾದ ಎಸ್. ಶಿವಣ್ಣ, ಹಿಂದೂ ಮಹಾಗಣಪತಿ ಸೇವಾ ಸಮಿತಿಯ ನಿರ್ದೇಶಕರುಗಳು ಕಾರ್ಯಕರ್ತರು ಪಾಲ್ಗೊಂಡಿದ್ದರು.

ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡುವು ಸರ್ಕಾರದಕರ್ತವ್ಯ– ಸಚಿವ ಸೋಮಣ್ಣ

ಕೊರಟಗೆರೆ ;–ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗಣಮಟ್ಟದ ಶಿಕ್ಷಣ ಸೌಲಭ್ಯಒದಗಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದು ಕೇಂದ್ರರೈಲ್ವೆ ಮತ್ತು ಜಲ ಶಕ್ತಿ ಖಾರೆರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು.

ಅವರು ತಾಲೂಕಿನ ತುಂಬಾಡಿ ಗ್ರಾಮದಲ್ಲಿ ಶಿಕ್ಷಣಕ್ಕೆ ಉತ್ತೇಜನ ನೀಡುವ ಮಹತ್ವದ ಅಬಿವೃದ್ಧಿ ಕಾರ್ಯಕ್ಕೆ ಸಂಸತ್ ಸದಸ್ಯರ ಸ್ಥಳೀಯ ಪ್ರದೇಶ ಅಬಿವೃದ್ಧಿ ಯೋಜನೆ ಅಡಿಯಲ್ಲಿ 1.5 ಕೋಟಿರೂ ಅನುದಾನದಲ್ಲಿ ನೂತನ ಸರ್ಕಾರಿ ಶಾಲಾ ಕೊಠಡಿಗಳ ನಿರ್ಮಾನಕ್ಕೆ ಶಂಕುಸ್ಥಾಪನೆ ನೇರವೇರಿಸಿ ಮಾತನಾಡಿ ಶಾಲಾ ಕಟ್ಟಡಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ಶಿಕ್ಷಣಕ್ಕೆ ಅಡಚಣೆ ಉಂಟಾಗಬಾರದು ಎಂಬ ನಿಟ್ಟಿನಲ್ಲಿ ಈ ಯೋಜನೆಯನ್ನು ಕೈಗೊಳ್ಳಲಾಗಿದೆ, ನೂತನ ಕೊಠಡಿಗಳ ನಿರ್ಮಾಣದಿಂದ ವಿಧ್ಯಾರ್ಥಿಗಳಿಗೆ ಸಕ್ತವಾದ ಕಲಿಕಾ ವಾತಾವರಣ ನಿರ್ಮಾಣವಾಗಲಿದ್ದು ಶಿಕ್ಷಕರಿಗೂ ಪಾಠಬೋಧನೆಗೆ ಉತ್ತಮ ಸೌಲಭ್ಯ ಒದಗಲಿದೆ ಎಂದರು.

ಈ ಯೋಜನೆ ಅಡಿ ನಿರ್ಮಾಣ ಗೊಳ್ಳಲಿರುವ ಶಾಲಾ ಕೊಠಡಿಗಳು ಆಧುನಿಕ ಸೌಲಭ್ಯಗಳನ್ನು ಒಳಗೊಂಡಿದ್ದು ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯ ವ್ಯವಸ್ಥೆಗಳು ಕಲ್ಪಿಸಿಲಾಗುವುದು, ಗ್ರಾಮೀಣ



ಶಾಲೆಗಳ ಅಭಿವೃದ್ಧಿಯ ಮೂಲಕ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವ ಉದ್ದೇಶದಿಂದ ಈ ರೀತಿಯ ಯೋಜನೆಗಳನ್ನು ಸರ್ಕಾರ ಮುಂದುವರಿಸುತ್ತಿದೆ ಎಂದು ತಿಳಿಸಿದ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸ್ಥಳೀಯ ಜನಪ್ರತಿನಿಧಿಳನ್ನು ಮತ್ತು ಅಧಿಕಾರಿಗಳಿಗೆ ಕಾಮಗಾರಿಯನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿ ಒಗಳೆ ಪೂರ್ಣಗೊಳಿಸಲು ಬದ್ದರಾಗುವ ಮೂಲಕ ಈ ಯೋಜನೆಯಿಂದ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆಎಂದು ತಿಳಿಸಿದರು.

ಈ ತುಂಬಾಡಿ ಕಾರ್ಯಕ್ರಮದೊಂದಿಗೆ ತಾಲೂಕಿನ ಥರಟಿ ಗ್ರಾಮದಲ್ಲಿ ಸಚಿವ ವಿ.ಸೋಮಣ್ಣ ನವರು ಸಂಸದರ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನದಡಿ ಶುದ್ಧ ಕುಡಿಯುವ ನೀರಿನ ಘಟಕ ಕಾಮಗಾರಿಗೆ ಶಂಕುಸ್ಥಾಪನೆ ಹಾಗೂ ತಾಲೂಕಿನ ಹೊಸಪಾಳ್ಯ ದುರ್ಗದ ನಾಗೇನಹಳ್ಳಿ ಗ್ರಾಮದಲ್ಲಿ ಗ್ರಾಮಸ್ಥರೊಂದಿಗೆ ಚರ್ಚಿಸಿ ಅವರ ಕುಂದು ಕೊರತೆಗಳ ಬಗ್ಗೆ ಆಲಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಭೂದಾನ ನೀಡಿದ ದೊಡ್ಡಯ್ಯ,ಹಾಗೂ ಅವರ ಕುಟುಂಬಸ್ಥರಿಗೆ ಸಚಿವರು ಸನ್ಮಾನಿಸಿ ಗೌರವಿಸಿ ಅಬಿನಂದಿಸಿದರು, ಈ ಸಂದರ್ಭದಲ್ಲಿ ಮಾಜಿ ಶಾಸಕ ಪಿ.ಆರ್.ಸುಧಾಕರಲಾಲ್, ನಿವೃತ್ತ ಐಎಎಸ್‌ಅಧಿಕಾರಿ ಅನಿಲ್‌ಕುಮಾರ್, ಉಪವಿಭಾಗಾಧಿಕಾರಿ ಗೂಟೂರು ಶಿವಪ್ಪ, ತಹಶೀಲ್ದಾರ್ ಕೆ.ಮಂಜುನಾಥ್, ತಾಲೂಕು ಜೆಡಿಎಸ್ ಅಧ್ಯಕ್ಷ ಕಾಮರಾಜು, ಬಿಜೆಪಿ ನಿಕಟ ಪೂರ್ವ ಅಧ್ಯಕ್ಷ ದರ್ಶನ್, ಜೆಡಿಎಸ್ ಮುಖಂಡರುಗಳಾದ ನರಸಿಂಹರಾಜು, ಅಶ್ವತ್ಥನಾರಾಯಣ್ ಸೇರಿದಂತೆ ಇನ್ನಿತರ ಗಣ್ಯರು ಗ್ರಾಮಸ್ಥರು ಹಾಜರಿದ್ದರು.

ಸಮ ಸಮಾಜದ ನಿರ್ಮಾಣಕ್ಕೆ ವಿದ್ಯಾರ್ಥಿಗಳು ಅಣಿಯಾಗಿಬೇಕು

ತಿಪಟೂರು: ಸ್ವಾತಂತ್ರ್ಯ ಬಂದು ಸಂವಿಧಾನ ಜಾರಿಯಾದ ಇಷ್ಟು ವರ್ಷಗಳ ನಂತರವೂ ಹಲವು ಕಡೆಗಳಲ್ಲಿ ಅಸ್ಪೃಶ್ಯತಾ ಆಚರಣೆ, ಮರ್ಯಾದೆ ಹತ್ಯೆಗಳು ನಡೆಯುತ್ತಿದ್ದು, ಈ ರೀತಿಯ ಸಮಾಜ ಪೀಡಕ ಪದ್ಧತಿಗಳಿಂದ ಮುಕ್ತವಾಗಲೂ ವಿದ್ಯಾರ್ಥಿಗಳ ಪಾತ್ರ ಮುಖ್ಯವಾಗಿದ್ದು, ತಮ್ಮ ಸುತ್ತ ಮುತ್ತ ಜಾತಿ ಪದ್ಧತಿ ವಿರುದ್ಧ ಜಾಗೃತಿ ಮೂಡಿಸಿ ವಿದ್ಯಾರ್ಥಿಗಳು ಸಮಸಮಾಜ ನಿರ್ಮಾಣಕ್ಕೆ ಅಣಿಯಾಗಬೇಕು ಎಂದು ಡಾ.ಬಿ.ಆರ್.ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ತಿಪಟೂರು ಅಧ್ಯಕ್ಷ ರಾಜಶೇಖರ್. ಕೆ ತಿಳಿಸಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎಪಿಜೆ ಅಬ್ದುಲ್ ಕಲಾಂ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ, ತಿಪಟೂರು ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ (ರಿ.) ತಿಪಟೂರು, ಸರ್ಕಾರಿ ಪ್ರಥಮದರ್ಜೆ ಕಾಲೇಜು, ರಾಷ್ಟ್ರೀಯ ಸೇವಾ ಯೋಜನೆ ತಿಪಟೂರು ಸಹಯೋಗದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ರವರ 135 ನೇ ಜನ್ಮದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಂಬೇಡ್ಕರ್ ಹಲವಾರು ವಿಷಯಗಳಲ್ಲಿ ಪರಿಣಿತರಾಗಿದ್ದು, ಪ್ರಪಂಚದಲ್ಲೇ ಅತಿ ಹೆಚ್ಚು ಪದವಿಗಳನ್ನು ಪಡೆದ ನಾಯಕ ಎಂದೆನಿಸಿಕೊಂಡವರು. ಅದಕ್ಕಾಗಿಯೇ ಅವರ ಜನ್ಮದಿನವನ್ನು ಇಂದು ಜಗತ್ತಿನಾದ್ಯಂತ ಜ್ಞಾನದ ದಿನವನ್ನಾಗಿ



ಆಚರಿಸುತ್ತೇವೆ. ಸಾಮಾಜಿಕ ಸಮಾನತೆ, ಲಿಂಗ ಸಮಾನತೆ, ಕಾರ್ಮಿಕ ಸ್ವಾತಂತ್ರ್ಯ ಸೇರಿದಂತೆ ದೇಶಕ್ಕೆ ಅವರ ಕೊಡುಗೆ ಅಪಾರ ಎಂದರು.

ಪ್ರಾಂಶುಪಾಲರಾದ ಡಾ.ಶಶಿಕುಮಾರ್.ಎಚ್.ಸಿ ಅವರು ಮಾತನಾಡಿ, ಅಂಬೇಡ್ಕರ್ ಅವರು ಯಾವುದೇ ಒಂದು ಜಾತಿ, ಸಮುದಾಯಕ್ಕೆ ಮಾತ್ರ ದುಡಿದವರಲ್ಲ. ಅವರು ನಮ್ಮೆಲ್ಲರ ಹಕ್ಕುಗಳಿಗಾಗಿ ಹೋರಾಡಿದವರು. ವಿಪರ್ಯಾಸವೆಂದರೆ ಇಂದು ಅವರನ್ನೇ ಒಂದು ಜಾತಿಗೆ ಸೀಮಿತ ಮಾಡಿಬಿಟ್ಟಿದ್ದೀವೀ. ಮುಂದಿನ ದಿನಗಳಲ್ಲಾದರೂ ಅವರ ಮತ್ತು ಸಂವಿಧಾನದ ಆಶಯಗಳನ್ನು ಅರಿತು ಬಾಳಬೇಕಿದೆ ಎಂದರು

ಇದೇ ಸಂದರ್ಭದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಕುರಿತು ನಡೆಸಲಾಗಿದ್ದ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಪ್ರಶಸ್ತಿ ಪತ್ರ ಮತ್ತು ನಗದು ಬಹುಮಾನ ವಿತರಿಸಲಾಯಿತು. ಬಿ.ಎ ತೃತೀಯ ವರ್ಷದ ವಿದ್ಯಾರ್ಥಿನಿ ಅಶ್ವಿನಿ.ಡಿ.ಬಿ ಪ್ರಥಮ ಸ್ಥಾನ, ಮೊನಿಕಾ.ಎಲ್. ಎಸ್, ದ್ವಿತೀಯ ಸ್ಥಾನ ಮತ್ತು ದ್ವಿತೀಯ ವರ್ಷದ ಚಿನ್ಮಯಿ.ಬಿ.ಸಿ ತೃತೀಯ ಸ್ಥಾನ ಪಡೆದರು.

ಕಾರ್ಯಕ್ರಮದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ತಿಪಟೂರು ನಿರ್ದೇಶಕ ಅನಿಲ್ ಕುಮಾರ್, ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ.ಶಿವಕುಮಾರ್.ಸಿ.ಜಿ, ಭೌತಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಶ್ರೀನಿವಾಸ್.ಇ, ವಾಣಿಜ್ಯ ಶಾಸ್ತ್ರವಿಭಾಗದ ಮುಖ್ಯಸ್ಥರಾದ ಡಾ.ಅನುಪ್ರಸಾದ್ ಕೆ.ಆರ್, ಮನಃಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಬಾಗಪ್ಪ ಚಲವಾದಿ ಸೇರಿದಂತೆ ವಿವಿಧ ವಿಭಾಗಗಳ ಪ್ರಾಧ್ಯಾಪಕ ವರ್ಗ, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೋದಿ ನಾಯಕತ್ವ ಭಾರತೀಯರಿಗೆ ಮಾದರಿ ಎಂದ ಎಚ್.ಡಿ. ಕುಮಾರಸ್ವಾಮಿ

ಮಂಡ್ಯ, ಮಂಡ್ಯ ಜಿಲ್ಲೆಯ ಆದಿ ಚುಂಚನಗಿರಿಯಲ್ಲಿ ನಿರ್ಮಾಣವಾಗಿರುವ ಭೈರಮೈಕ್ಯ ಮಂದಿರವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿ ಬಳಿಕ ನಡೆದ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಈ ವೇಳೆ ಉಪಸ್ಥಿತರಿದ್ದ ಕೇಂದ್ರ ಸಚಿವ, ಜೆಡಿಎಸ್ ಮುಖಂಡ ಎಚ್.ಡಿ. ಕುಮಾರಸ್ವಾಮಿ ಮೋದಿ ಅವರನ್ನು ಭಾರತದ ಹೆಮ್ಮೆಯ ಪುತ್ರ ಎಂದು ಬಣ್ಣಿಸಿದರು. ಅವರ ದೂರದೃಷ್ಟಿಯನಾಯಕತ್ವ, ಅಚಲಬದ್ಧತೆಮತ್ತು ದಣಿವರಿಯದಸಮರ್ಪಣೆ ರಾಷ್ಟ್ರದಾದ್ಯಂತ ಲಕ್ಷಾಂತರ ಜನರ ಆಳವಾದ ನಂಬಿಕೆ ಮತ್ತು ಪ್ರೀತಿಯನ್ನು ಗಳಿಸಿದೆ ಎಂದರು.

ಪರಮಪೂಜ್ಯ ಜಗದ್ಗುರು ಡಾ. ನಿರ್ಮಲಾನಂದನಾಥ



ಮಹಾಸ್ವಾಮೀಜಿ ಅವರ ದಿವ್ಯ ಮಾರ್ಗದರ್ಶನದಲ್ಲಿ ಹಾಗೂ ಸೇವೆ, ಶಿಕ್ಷಣ, ಕರುಣೆಯ ಮೂಲಕ ಸಮಾಜವನ್ನು ಪರಿವರ್ತಿಸಿದ ಅತ್ಯುನ್ನತ ಅಧ್ಯಾತ್ಮಿಕ ಶಕ್ತಿಯಾದ ಪದ್ಮಭೂಷಣ ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿ ಹಾಕಿಕೊಟ್ಟ ಅನನ್ಯ ಪರಂಪರೆಗೆ ಮೀಸಲಾಗಿರುವ ಈ ಐತಿಹಾಸಿಕ ಸಮಾರಂಭದಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರೊಂದಿಗೆ ನಾನು ಸಹ ಭಾಗಿಯಾಗಿದ್ದು ದಿವ್ಯಾನುಭೂತಿ ನೀಡಿದೆಎಂದು ಎಚ್‌ಡಿಕೆ ತಿಳಿಸಿದರು. ಜತೆಗೆ ಬಾಲಗಂಗಾಧರನಾಥ ಸ್ವಾಮೀಜಿ ಅವರ ಪರಂಪರೆ ಮುಂದಿನ ತಲೆಮಾರಿಗೆ ದಾರಿದೀಪವಾಗಲಿದೆ ಎಂದು ಅಭಿಪ್ರಾಯಪಟ್ಟರು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಸ್ಫೂರ್ತಿದಾಯಕ ನಾಯಕತ್ವದಲ್ಲಿ ರಾಷ್ಟ್ರವು ಶಕ್ತಿ, ಪ್ರಗತಿ ಮತ್ತು ಸಾಂಸ್ಕೃತಿಕ ಪುನರುತ್ಥಾನದ ಹೊಸಯುಗಕ್ಕೆ ಸಾಕ್ಷಿಯಾಗುತ್ತಿದೆ. ಆಧ್ಯಾತ್ಮಿಕತೆ ಮತ್ತು ಅಭಿವೃದ್ಧಿ ಪರಸ್ಪರ ಪೂರಕವಾಗಿದ್ದು, ಸೇವೆ ಮತ್ತು ಏಕತೆಯ ಮೌಲ್ಯಗಳನ್ನು ಚೈತನ್ಯಶೀಲತೆಯಿಂದ ಬಲಪಡಿಸಲಾಗುತ್ತಿದೆ. ಈ ಕ್ಷಣವು ಶ್ರೀಗಳ ಆದರ್ಶಗಳಿಂದ ಮಾರ್ಗದರ್ಶಿಸಲ್ಪಟ್ಟ ಮತ್ತು ರಾಷ್ಟ್ರದ ಚುಕ್ಕಾಣಿ ಹಿಡಿದಿರುವ ಕ್ರಿಯಾಶೀಲ, ಬಲಿಷ್ಠ ನಾಯಕತ್ವದಿಂದ ವಿಕಸಿತ ಭಾರತ ನಿರ್ಮಾಣಕ್ಕೆ ನಾವೆಲ್ಲರೂ ಸಂಕಲ್ಪ ತೊಟ್ಟಿದ್ದೇವೆ ಎಂದರು.

ಕಾರ್ಯಕ್ರಮಕ್ಕೆ ಆಗಮಿಸಿ ಲೋಕಾರ್ಪಣೆ ನಡೆಸಿಕೊಟ್ಟ ಮೋದಿ ಅವರಿಗೆ ಧನ್ಯವಾದಗಳು ಎಂದು ತಿಳಿಸಿದರು.

ರುಡ್‌ಸೆಟ್ ಸಂಸ್ಥೆ : ಟೈಲರಿಂಗ್ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು: ರುಡ್‌ಸೆಟ್ ಸಂಸ್ಥೆ ವತಿಯಿಂದ ಮೇ 11 ರಿಂದ ಮಹಿಳೆಯರಿಗಾಗಿ ಟೈಲರಿಂಗ್ ಕುರಿತು 31 ದಿನಗಳ ಉಚಿತ ತರಬೇತಿ ನೀಡಲು ಉದ್ದೇಶಿಸಿದ್ದು, ತರಬೇತಿ ಪಡೆಯಲಿಚ್ಛಿಸುವ ಆಸಕ್ತ ಗ್ರಾಮೀಣ ನಿರುದ್ಯೋಗಿ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 18 ರಿಂದ 50 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಭಾಗದ ಬಿಪಿಎಲ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಹೊಂದಿರಬೇಕು.

ತರಬೇತಿಯು ವಸತಿಯುತವಾಗಿದ್ದು, ತರಬೇತಿ ಅವಧಿಯಲ್ಲಿ ಉಚಿತ ಊಟದ ವ್ಯವಸ್ಥೆ ಕಲ್ಪಿಸಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9380162042, 9481506564, 9740982585ನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಿಪಟೂರಿನ ಹೊನ್ನವಳ್ಳಿ ಹೋಬಳಿಯ ಬಳವನೇರಲು ಗ್ರಾಮದ ಉಡಿಸಲಮ್ಮ ದೇವಿ ಜಾತ್ರಾಮಹೋತ್ಸವದ ಅಂಗವಾಗಿ ಬನ್ನಿಮರ (ಈಚಲಮರ) ಹತ್ತುವ ಕಾರ್ಯಕ್ರಮವು ಉಡಿಸಲಮ್ಮ, ಚೌಡಮ್ಮ, ದೂತಾರಾಯ ಸ್ವಾಮಿ ನೇತೃತ್ವದಲ್ಲಿ ನೂರಾರು ಭಕ್ತರ ನಡುವೆ ನಡೆಯಿತು.



ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

ಮಹನೀಯರ ಕೊಡುಗೆ ಅವಿಸ್ಮರಣೀಯ: ಡಾ.ಅಸ್ಗರ್ ಬೇಗ್

ಜಿಲ್ಲಾಸ್ಪತ್ರೆಯಲ್ಲಿ ಅಂಬೇಡ್ಕರ್, ಬಾಬೂಜಿ ಜಯಂತಿ ಆಚರಣೆ

ತುಮಕೂರು: ಸರ್ವರೂ ಸಮಾನರು ಎಲ್ಲರಿಗೂ ಸಮಾನ ಹಕ್ಕು, ಅವಕಾಶ ಸಿಗಬೇಕು ಎಂದು ಪ್ರತಿಪಾದಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರು ತಾವು ರಚಿಸಿದ ಸಂವಿಧಾನದ ಮೂಲಕ ಸಾಕಾರಗೊಳಿಸಿದ್ದಾರೆ. ವಿಶ್ವವೇ ಮೆಚ್ಚುವ ಶ್ರೇಷ್ಠ ಸಂವಿಧಾನವನ್ನು ಭಾರತಕ್ಕೆ ಕೊಟ್ಟಿದ್ದಾರೆ ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಅಸ್ಗರ್ ಬೇಗ್ ಹೇಳಿದರು.



ನಗರದ ಜಿಲ್ಲಾ ಆಸ್ಪತ್ರೆ ಸಭಾಂಗಣದಲ್ಲಿ ಸಂವಿಧಾನ ಡಾ.ಬಿ.ಆರ್. ಅಂಬೇಡ್ಕರ್ ಅವರ 135 ನೇ ಜನ್ಮ ದಿನಾಚಾರಣೆ ಹಾಗೂ ಹಸಿರು ಕ್ರಾಂತಿ ಹರಿಕಾರ ಭಾರತದ ಉಪ ಪ್ರಧಾನಮಂತ್ರಿ ಡಾ. ಬಾಬು ಜಗಜೀವನ್ ರಾಮ್ ರವರ 119ನೇ ಜಯಂತಿಯಲ್ಲಿ ಮಹನೀಯರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು. ಮಹಿಳೆಯನ್ನು ಎರಡನೇ ದರ್ಜೆ ಪ್ರಜೆಯಾಗಿ ಕಾಣುತ್ತಿದ್ದ ಅಂದಿನ ಸಮಾಜದ ಪರಿವರ್ತನೆಗೆ ಹೋರಾಟ ನಡೆಸಿದ ಅಂಬೇಡ್ಕರ್ ಅವರು, ಸಂವಿಧಾನದ ಮೂಲಕ ಮಹಿಳೆಯರಿಗೂ ಸಮಾನ ಹಕ್ಕಿ, ಸ್ವಾಭಿಮಾನದ ಬದುಕು ದೊರೆಯಲು ಕಾರಣರಾಗಿದ್ದಾರೆ. ಜಾರಿ, ಧರ್ಮ ಮೀರಿ ಎಲ್ಲರೂ ಸಮಾನತೆಯಿಂದ ಬಾಳಬೇಕು. ಬಲಿಷ್ಠ ಭಾರತ ನಿರ್ಮಾಣದ ಕನಸು ಕಂಡಿದ್ದ ಬಾಬೂ ಜಗಜೀವನರಾಮ್ ಅವರು ಅನೇಕ ಯೋಜನೆಗಳನ್ನು ಜಾರಿಗೊಳಿಸಿದರು. ಕೃಷಿ ಕ್ಷೇತ್ರದ ಬೆಳವಣಿಗೆಗೆ ಒತ್ತು ನೀಡಿದ್ದ ಬಾಬೂಜಿ ಹಸಿರು ಕ್ರಾಂತಿಯ ಹರಿಕಾರರಾಗಿ ಹೆಸರಾದರು. ಈ ಮಹನೀಯರು ದೇಶಕ್ಕೆ ಕೊಟ್ಟ ಕೊಡುಗೆ ಅವಿಸ್ಮರಣೀಯ ಎಂದು ತಿಳಿಸಿದರು.

ಜಿಲ್ಲಾ ಆಸ್ಪತ್ರೆಯ ತಜ್ಞವೈದ್ಯಾಧಿಕಾರಿ ಡಾ. ಪ್ರಸನ್ನಕುಮಾರ್, ಆಸ್ಪತ್ರೆಯ ಸ್ಥಾನಿಕ ವೈದ್ಯಾಧಿಕಾರಿ ಡಾ. ನಾಗರಾಜ್ ಅವರು ಅಂಬೇಡ್ಕರ್, ಬಾಬು ಜಗಜೀವನರಾಮ್ ಅವರು ದೇಶಕ್ಕೆ ಕೊಟ್ಟ ಕೊಡುಗೆ ಸ್ಮರಿಸಿ, ಮಹನೀಯರ ತತ್ವ, ಆದರ್ಶಗಳನ್ನು ಎಲ್ಲರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ಆದರ್ಶವಾಗಿ ಬಾಳಬೇಕು ಎಂದು ಹೇಳಿದರು.

ಡಾ. ಚಂದ್ರಪ್ರಕಾಶ್, ಡಾ. ಯಶ್ವಂತ್, ಡಾ. ಸುಮಿತ್ರ, ಸಹಾಯಕ ಆಡಳಿತ ಅಧಿಕಾರಿಗಳಾದ ನಾರಾಯಣಸ್ವಾಮಿ ರವಿ, ಶುಶ್ರೂಷ ಅಧೀಕ್ಷಕಿ ಭುವನೇಶ್ವರಿ, ರಾಜ್ಯ ಸರ್ಕಾರಿ ನೌಕರ ಸಂಘದ ನಿರ್ದೇಶಕರೂ, ರಾಜ್ಯ ಸರ್ಕಾರಿ ಎನ್‌ಪಿಎಸ್ ನೌಕರ ಸಂಘ ಅಧ್ಯಕ್ಷರಾದ ಮಂಜುನಾಥ ಎಚ್.ಡಿ. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮಹಿಳಾ ಮೀಸಲಾತಿ ಶೇ.33 ಬದಲು 50 ರಷ್ಟು ನೀಡುವುದು ಸೂಕ್ತ

ಗುಬ್ಬಿ : ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ನಮ್ಮ ಬೆಂಬಲವಿದೆ. ಆದರೆ ಶೇ.33% ಬದಲು 50% ರಷ್ಟು ನೀಡುವುದು ಒಳ್ಳೆಯದು. ಮಹಿಳೆಯರಿಗೆ ಅವಕಾಶ ಸಿಕ್ಕರೆ ಪ್ರಾಮಾಣಿಕ ಕೆಲಸವನ್ನು ನಿರೀಕ್ಷೆ ಮಾಡಬಹುದು ಎಂದು ರಾಜ್ಯ ಸಾರಿಗೆ ನಿಗಮದ ಅಧ್ಯಕ್ಷ ಹಾಗೂ ಶಾಸಕ ಎಸ್. ಆರ್.ಶ್ರೀನಿವಾಸ್ ಅಭಿಪ್ರಾಯಪಟ್ಟರು.



ಗುಬ್ಬಿ ಪಟ್ಟಣದ ಬಿಲ್ಲೆಪಾಳ್ಯ ಗ್ರಾಮದಲ್ಲಿ 37 ಲಕ್ಷ ಅನುದಾನದಲ್ಲಿ ರಸ್ತೆ ಕಾಮಗಾರಿ, ಬಲದಂಡೆ ಕೋಡಿ ಚರಂಡಿ ಕಾಮಗಾರಿಗೆ 75 ಲಕ್ಷ, ಬಸವ ನಗರದ ರಸ್ತೆ ಕಾಮಗಾರಿಗೆ 1 ಕೋಟಿ, ಸುಭಾಷ್ ನಗರ ಸೇರಿದಂತೆ ಇನ್ನಿತರ ಕಡೆಗಳಲ್ಲಿ ಅಂಗನವಾಡಿ ಕಟ್ಟಡ ಕಾಮಗಾರಿಗೆ 69 ಲಕ್ಷ ಅನುದಾನ ಮತ್ತು ಪಟ್ಟಣದ ಹೈಟೆಕ್ ಬಸ್ ನಿಲ್ದಾಣ ಕಾಮಗಾರಿಗೆ 9 ಕೋಟಿ ಅನುದಾನದ ಎಲ್ಲಾ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು ಕ್ಷೇತ್ರ ಪುನರ್ ವಿಂಗಡಣೆ ಹಾಗೂ ಮಹಿಳಾ ಮೀಸಲಾತಿ ಒಟ್ಟಿಗೆ ಜಾರಿಗೊಳ್ಳುವ ಸಾಧ್ಯತೆ ಇದೆ ಎಂದರು.

ಎಲ್ಲಾ ರಂಗದಲ್ಲಿಯೂ ಮಹಿಳೆಯರೇ ಮುಂದೆ ಇದ್ದು ನಮ್ಮ ತಾಲೂಕಿನಲ್ಲಿಯೂ ಮಹಿಳಾ ಅಧಿಕಾರಿಗಳು ಹೆಚ್ಚಾಗಿದ್ದಾರೆ. ಪ್ರಾಮಾಣಿಕ ಕೆಲಸ ಇಲ್ಲಿ ನಡೆದಿದೆ ಎಂದ ಅವರು ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆ ಸರಿಯಿದೆ. 2029 ರ ಸಂಸದರ ಚುನಾವಣೆ ವೇಳೆಗೆ ಮಹಿಳಾ ಮೀಸಲಾತಿ ಜೊತೆಗೆ ಕ್ಷೇತ್ರ ವಿಂಗಡಣೆ ಒಟ್ಟಿಗೆ ಆಗಬೇಕಿದೆ ಎಂದರು.

ಹೈಕಮಾಂಡ್ ಭೇಟಿ ಕೇವಲ ಮಂತ್ರಿಸ್ಥಾನದ ಲಾಭಿ ಅಲ್ಲದೆ ಸಿಎಂ ಕುರ್ಚಿ ಬದಲಾವಣೆಗೆ ನಡೆಯುತ್ತಿರುವ ಒಂದು ಒಳಜಗಳ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾಡಿರುವ ಟೀಕೆಗೆ ಪ್ರತಿಕ್ರಿಯೆ ನೀಡಿದ ಅವರು ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಾಗ ಸಚಿವ ಸ್ಥಾನಕ್ಕೆ ಲಾಭಿ ನಡೆಸಿಲ್ಲವೇ, ಎಷ್ಟು ಮಂದಿ ಸಿಎಂ ಹುದ್ದೆ ಅಲಂಕರಿಸಿದ್ದಾರೆ. ಸಹಜವಾಗಿ ನಡೆಯುವ ಪ್ರಕ್ರಿಯೆ ಇದಾಗಿದ್ದು ಹೈಕಮಾಂಡ್ ಭೇಟಿಗೆ ಕೆಲವು ಶಾಸಕರು ಮುಂದಾಗಿ ಅವರವರ ಬೇಡಿಕೆ ಹೇಳಿಕೊಳ್ಳುವುದರಲ್ಲಿ ತಪ್ಪೇನಿದೆ ಅದಕ್ಕೆ ಏನೇನೋ ಕಥೆ ಕಟ್ಟೋದು ಸರಿಯಲ್ಲ ಎಂದು ಕುಟುಕಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ತಾಲ್ಲೂಕು ಅಧ್ಯಕ್ಷ ವೆಂಕಟೇಶ್, ಮುಖಂಡರಾದ ಬಿಲ್ಲೇಪಾಳ್ಯ ನರಸಿಂಹಮೂರ್ತಿ, ಲೋಕೇಶ್ ಬಾಬು ಸೇರಿದಂತೆ ಸಾರಿಗೆ ನಿಗಮದ ಅಧಿಕಾರಿಗಳು ಇನ್ನಿತರರು ಇದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHEDAT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.